

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 275 | ₹ ಬೆಲೆ: 4 | Wednesday, 27, December.2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಬಿಎಸ್ ವೈ ಸರ್ಕಾರದಲ್ಲಿ 40 ಸಾವಿರ ಕೋಟಿ ರೂ. ಅವ್ಯವಹಾರ: ಬಿಜೆಪಿ ಶಾಸಕ ಯತ್ನಾಳ್ ಆರೋಪ



ವಿಜಯಪುರ: ಯಾರು ಯಾರು ಲೂಟಿ ಮಾಡಿ ಎಲ್ಲೆಲ್ಲಿ ಆಸ್ತಿ ಮಾಡಿದ್ದಾರೆ ಎಂಬುದನ್ನು ಹೊರ ತೆಗೆಯುವೆ. ಕೊರೊನಾ ಮೊದಲನೇ ಅಲೆಯಲ್ಲಿ ಬಿಎಸ್ ಯಡಿಯೂರಪ್ಪ ಮುಖ್ಯಮಂತ್ರಿ ಇದ್ದರು. ಈ ವೇಳೆ ವೇಳೆ 40,000 ಕೋಟಿ ರೂಪಾಯಿ ಅವ್ಯವಹಾರ ಮಾಡಿದ್ದಾರೆ. ಪ್ರತಿಯೊಬ್ಬ ಕೊರೋನಾ ರೋಗಿಗೆ 8 ರಿಂದ 10 ಲಕ್ಷ ರೂಪಾಯಿ ಬಿಲ್ ಮಾಡಿದ್ದಾರೆ. ನಮ್ಮ ಸರ್ಕಾರವಿದ್ದರೇನು, ಕಳ್ಳರು ಕಳ್ಳರೇ ಅಲ್ಲವಾ ಎಂದು ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪ ಮಾಡಿದರು.

ವಿಜಯಪುರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೊರೊನಾ ಸಂದರ್ಭದಲ್ಲಿ 45 ರೂಪಾಯಿ ಮಾಸ್ಕ್ಗೆ 485 ರೂಪಾಯಿ ನಿಗದಿಪಡಿಸಿದರು. ಬೆಂಗಳೂರಿನಲ್ಲಿ 10 ಸಾವಿರ ಬೆಡ್ ಸಿದ್ಧಪಡಿಸಿದ್ದರು. ಇದಕ್ಕೆ 10 ಸಾವಿರ ಬೆಡ್ ಬಾಡಿಗೆ ಪಡೆದಿದರು. ಆ ಹಣದಲ್ಲೇ ಬೆಡ್ಗಳನ್ನು ಖರೀದಿ ಮಾಡಿದ್ದರೆ ಉಳಿಯುತ್ತಿತ್ತು. ಇದರಲ್ಲಿ ಎಷ್ಟು ಸಾವಿರ ಕೋಟಿ ರೂಪಾಯಿ ಕೊಳ್ಳೆ ಹೊಡೆದಿದ್ದೀರಿ? ಈ ವಿಚಾರವನ್ನು ಬಿಎಸ್ ಯಡಿಯೂರಪ್ಪ ಅವರಿಗೆ ವಿಧಾನಸೌಧದಲ್ಲಿ ಹೇಳಿದ್ದೇನೆ. ನನಗೆ ಕೊರೊನಾ ಪಾಸಿಟಿವ್ ಆದಾಗ ಮಣಿಪಾಲ್ ಆಸ್ಪತ್ರೆಯಲ್ಲಿ 5 ಲಕ್ಷ 80 ಸಾವಿರ ತೆಗೆದುಕೊಂಡರು. ಇಷ್ಟು ಹಣವನ್ನು ಬಡವರಾದವರು ಎಲ್ಲಿಂದ ಕೊಡಬೇಕೆಂದು ವಿಧಾನಸೌಧದಲ್ಲಿ ಮಾತನಾಡಿದ್ದೆ ಎಂದು ತಿಳಿಸಿದರು.

ಆರೋಗ್ಯ ವಿಚಾರದಲ್ಲಿ ನಾನು ಯಾವುದೇ ರೀತಿಯ ಸರ್ಕಾರದಿಂದ ಹಣ ಇಲ್ಲಿವರೆಗೂ ಪಡೆದಿಲ್ಲ. ಶಾಸಕರಿಗೆ 2 ಲಕ್ಷ ರೂಪಾಯಿ ಸಂಬಳವಿದೆ. ನಾನು ಕಮಿಟಿ ಸಭೆಗೆ ಹೋದರೇ 65 ಸಾವಿರ ರೂಪಾಯಿ ಸಿಗುತ್ತದೆ. ತೆಗೆದುಕೊಂಡರೆ ನಾವು ಮನುಷ್ಯರಾ? ಎಂದರು.

ಇವರು ನನಗೆ ನೊಟೀಸ್ ಕೊಡಲಿ, ಪಕ್ಷದಿಂದ ಹೊರ ಹಾಕಲು ನೋಡಲಿ ಇವರೆಲ್ಲರ ಬಣ್ಣ ಬಯಲು ಮಾಡುತ್ತೇನೆ. ಸತ್ಯ ಹೇಳಿದರೆ ಎಲ್ಲರಿಗೂ ಭಯ ಹೀಗಾಗಿ ಭಯದಲ್ಲಿ ಇಡಬೇಕು. ಎಲ್ಲರೂ ಕಳ್ಳರಾದರೆ ರಾಜ್ಯ, ದೇಶವನ್ನು ಯಾರು ಉಳಿಸುತ್ತಾರೆ ಎಂದು ಪ್ರಶ್ನಿಸಿದರು.

# ರಾಜ್ಯ ಸರ್ಕಾರದ 5 ನೇ ಗ್ಯಾರಂಟಿ 'ಯುವನಿಧಿ' ನೋಂದಣಿಗೆ ಸಿಎಂ ಅಧಿಕೃತ ಚಾಲನೆ



ಬೆಂಗಳೂರು: ಡಿಪ್ಲೊಮಾ, ಪದವೀಧರರಿಗೆ ರಾಜ್ಯ ಸರ್ಕಾರ ಭರ್ಜರಿ ಗುಡ್ ನ್ಯೂಸ್ ನೀಡಿದ್ದು, ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಗೆ ಚಾಲನೆ ಸಿಕ್ಕಿದೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ನಡೆದ ಯುವನಿಧಿ ನೋಂದಣಿ ಕಾರ್ಯಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಚಾಲನೆ ನೀಡಿದರು.

ಈ ಮೂಲಕ ಯುವನಿಧಿ ಯೋಜನೆಗೆ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ಇಂದಿನಿಂದ ನಿರುದ್ಯೋಗಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಈ ವೇಳೆ ಡಿಸಿಎಂ ಡಿಕೆ ಶಿವಕುಮಾರ್, ಸಚಿವ ಪ್ರಿಯಾಂಕ್ ಖರ್ಗೆ ಮತ್ತಿತರರು ಉಪಸ್ಥಿತರಿದ್ದರು.

**ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸುವುದು ಹೇಗೆ?:** ಯುವನಿಧಿ ಯೋಜನೆಗೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗುತ್ತದೆ. ಇದಕ್ಕಾಗಿ ನೀವು ಸೇವಾಸಿಂಧು ಪೋರ್ಟಲ್ https://sevasindhu.karnataka.gov.in ಗೆ ಬೇಟಿ ನೀಡಬೇಕಾಗುತ್ತದೆ.

ಡಿಸೆಂಬರ್ 26 ರಿಂದ ಸೇವಾ ಸಿಂಧು ಪೋರ್ಟಲ್ ಮೂಲಕ ಈ ಯೋಜನೆಗೆ ಅರ್ಜಿ ಸಲ್ಲಿಸಬಹುದು.

ಯುವ ನಿಧಿ ನಿರುದ್ಯೋಗ ಭತ್ಯೆ ಯಾರಿಗೆ ಎಷ್ಟು? ಪದವೀಧರರಿಗೆ ಪ್ರತಿ ತಿಂಗಳು 3000 ರೂಪಾಯಿ, ಡಿಪ್ಲೊಮೋ ಪದವೀಧರರಿಗೆ ಪ್ರತಿ ತಿಂಗಳು 1500 ರೂಪಾಯಿ

ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ 3000 ರೂ. ನಿಗದಿ ಮಾಡಿದ್ದರೆ, ಡಿಪ್ಲೊಮ ಪಾಸ್ ನಿರುದ್ಯೋಗಿಗಳಿಗೆ ಮಾಸಿಕ 1500 ರೂ. ಸಿಗಲಿದೆ. ಕರ್ನಾಟಕ ಸರ್ಕಾರದ ಯುವ ನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆಯನ್ನು 2 ವರ್ಷಗಳ ಅವಧಿಗೆ ನಿರುದ್ಯೋಗಿ ಯುವಕರಿಗೆ ಮಾತ್ರ ನೀಡಲಾಗುತ್ತದೆ.

ಫಲಾನುಭವಿಯು 2 ವರ್ಷಗಳ ನಂತರ ಅಥವಾ 2 ವರ್ಷಗಳ ಅವಧಿಯಲ್ಲಿ ಉದ್ಯೋಗವನ್ನು ಕಂಡುಕೊಂಡರೆ ನಿರುದ್ಯೋಗ ಭತ್ಯೆಯನ್ನು ತಕ್ಷಣವೇ ನಿಲ್ಲಿಸಲಾಗುತ್ತದೆ.

**ಈ ದಾಖಲೆಗಳು ಬೇಕು**

1) ಎಸ್ ಎಸ್ ಎಲ್ ಸಿ ಅಂಕ ಪಟ್ಟಿ
2) ಪಿಯುಸಿ ಅಂಕಪಟ್ಟಿ
3) ಸಿಇಟಿ ರಿಜಿಸ್ಟ್ರೇಶನ್
4) ರೇಷನ್ ಕಾರ್ಡ್
5) ಆಧಾರ್ ಕಾರ್ಡ್
6) ಆದಾಯ ಪ್ರಮಾಣ ಪತ್ರ
7) ಶಿಕ್ಷಣ ಸಂಸ್ಥೆಯಿಂದ ಪಡೆದ ಪ್ರಮಾಣ ಪತ್ರ ಹಾಗೂ ಅಂಕಪಟ್ಟಿ
8) ಬ್ಯಾಂಕ ಖಾತೆಯ ವಿವರ
9) ಇ-ಮೇಲ್ ಐಡಿ
10) ಮೊಬೈಲ್ ಸಂಖ್ಯೆ
11) ಭಾವಚಿತ್ರ

**ಎಲ್ಲಿ ಅರ್ಜಿ ಸಲ್ಲಿಸಬಹುದು?:** ಪತ್ರಿ ತಿಂಗಳು 25 ರೊಳಗೆ ಅರ್ಜಿ ಸಲ್ಲಿಸಲು ಅವಕಾಶ ಇದೆ. ಸೇವಾ ಸಿಂಧುವಿನಲ್ಲಿ ಅರ್ಜಿ ಸಲ್ಲಿಸಬಹುದು. ಕರ್ನಾಟಕ ಓನ್, ಬಾಪೂಜಿ ಸೇವಾ ಕೇಂದ್ರ, ಗ್ರಾಮ ಓನ್ ಕೇಂದ್ರಗಳಲ್ಲಿಯೂ ಅರ್ಜಿ ಸಲ್ಲಿಸಬಹುದು ಎಂದು ಸಚಿವರು ತಿಳಿಸಿದ್ದಾರೆ.

ಆರು ತಿಂಗಳವರೆಗೆ ಯಾವುದೇ ಕೆಲಸ ಸಿಗದಿದ್ದರೆ ಅಥವಾ ಅವರು ಎಲ್ಲಾದ್ರೂ ಸ್ವಉದ್ಯೋಗ ಕೈಗೊಳ್ಳದಿದ್ದರೆ, ಉನ್ನತ ಶಿಕ್ಷಣಕ್ಕೆ ಹೋಗದಿದ್ದರೆ ಯುವನಿಧಿ ಯೋಜನೆಗೆ ಅರ್ಹರು. ಯುವನಿಧಿ ಯೋಜನೆಯಡಿ ಡಿಪ್ಲೋಮಾ ಪದವಿ ಪಡೆದವರಿಗೆ 1,500 ರೂ. ಪದವೀಧರರಿಗೆ 3,000 ರೂ.ಗಳನ್ನು ನಿರುದ್ಯೋಗ ಭತ್ಯೆಯನ್ನು ಎರಡು ವರ್ಷಗಳವರೆಗೆ ನೀಡಲಾಗುತ್ತದೆ.

## ತೆರಿಗೆ ಹೆಚ್ಚಳದ ಸುಳಿವು ನೀಡಿದ ಸಚಿವ ಎಚ್.ಕೆ. ಪಾಟೀಲ್



ಶಿರಸಿ: ಗ್ಯಾರಂಟಿ ಯೋಜನೆಗಳು ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ಹೊರೆಯಾಗಿರುವುದು ನಿಜ. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉತ್ತಮವಾಗಿ ನಿರ್ವಹಿಸುತ್ತಿದ್ದಾರೆಂದು ಪ್ರವಾಸೋದ್ಯಮ ಸಚಿವ ಎಚ್ಕೆ ಪಾಟೀಲ್ ಅವರು ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಬರುವ ಬಜೆಟ್ನಲ್ಲಿ ಹೆಚ್ಚುವರಿ ತೆರಿಗೆ ಒಳಗೊಂಡ ಯೋಜನೆಗಳನ್ನು ಮುಂದುವರಿಸಲು ಸರ್ಕಾರ ವಿವಿಧ ಮೂಲಗಳ ಮೂಲಕ ಆದಾಯ ಗಳಿಸಲು ಚಿಂತನೆ ನಡೆಸುತ್ತಿದೆ ಎಂದು ಹೇಳುವ ಮೂಲಕ ತೆರಿಗೆ ಹೆಚ್ಚಳದ ಮುನ್ಸೂಚನೆ ನೀಡಿದರು.

ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ನಮಗೆ ಭಾರ ಬಿದ್ದಿದೆ. ಮುಖ್ಯಮಂತ್ರಿ ಚಾಣಾಕ್ಷ ನೀತಿಯಿಂದ ಇದನ್ನು ನೀಗಿಸುತಿದ್ದಾರೆ. ಹಲವು ಮೂಲಗಳಿಂದ ಹೆಚ್ಚು ಹಣ ಕ್ರೋಢೀಕರಣ ಮಾಡುವ ಮೂಲಕ ಸರಿದೂಗಿಸುತ್ತೇವೆ. ಈ ಬಜೆಟ್ ನಲ್ಲಿ ತೆರಿಗೆ ಹೆಚ್ಚಳ ಮಾಡಬಹುದು ಎಂದರು.

ಬಿ.ಕೆ.ಹರಿಪ್ರಸಾದ್ ಅವರನ್ನು ಸಮಾಧಾನಪಡಿಸುವ ವಿಚಾರವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಬಿ.ಕೆ.ಹರಿಪ್ರಸಾದ್ ವರ್ಕಿಂಗ್ ಕಮಿಟಿ ಸದಸ್ಯರು. ಅವರನ್ನು ನಾವು ಸಮಾಧಾನ ಪಡಿಸುವುದಲ್ಲ, ಅವರು ನಮ್ಮನ್ನು ಸಮಾಧಾನಪಡಿಸಬೇಕು ಎಂದು ಪ್ರತಿಕ್ರಿಯಿಸಿದರು.

ಲೋಕಸಭೆ ಚುನಾವಣೆ ಹಿನ್ನೆಲೆ ಯಾರು ಅಭ್ಯರ್ಥಿ ಆದರೆ ಸೂಕ್ತ ಎಂಬುದನ್ನು ಅಧ್ಯಯನ ನಡೆಸಲಾಗುತ್ತಿದೆ.

ಪಕ್ಷದ ನಾಯಕರು ಮತ್ತು ಕಾರ್ಯಕರ್ತರ ಅಭಿಪ್ರಾಯ ಪಡೆದು ಕೆಪಿಸಿಸಿಗೆ ವರದಿ ಸಲ್ಲಿಸಲಾಗುವುದು. ಉತ್ತರ ಕನ್ನಡದಿಂದ ಆರು ಜನ ಟಿಕೆಟ್ ಆಕಾಂಕ್ಷಿಗಳಿದ್ದಾರೆ.

ಈಗಾಗಲೇ ಅಂಕೋಲಾದಲ್ಲಿ ಸಭೆ ನಡೆಸಿ ಸಾಕಷ್ಟು ನಾಯಕರು ಹಾಗೂ ಕಾರ್ಯಕರ್ತರನ್ನು ಭೇಟಿಯಾಗಿ ಸಮಾಲೋಚನೆ ನಡೆಸಿದ್ದೇನೆ. ಅದರಂತೆ ಈಗ ಶಿರಸಿಯಲ್ಲೂ ಸಭೆ ನಡೆಸಿ ಮಾಹಿತಿ ಕಲೆ ಹಾಕುತ್ತಿದ್ದೇನೆ ಎಂದರು.

## ಡಿ.30ರೊಳಗೆ ಲೋಕಸಭೆ ಆಕಾಂಕ್ಷಿಗಳ ಲಿಸ್ಟ್ ಹೈಕಮಾಂಡ್‌ಗೆ: ಸಚಿವ ಸತೀಶ್ ಜಾರಕಿಹೊಳಿ



ವಿಜಯಪುರ: ಈಗಾಗಲೇ ವಿಜಯಪುರ ಲೋಕಸಭಾ ಕ್ಷೇತ್ರಕ್ಕೆ ಸ್ಪರ್ಧಿಸಲು ಇಚ್ಛಿಸುವ ಆಕಾಂಕ್ಷಿಗಳ ಹೆಸರುಗಳನ್ನು ಹೈಕಮಾಂಡ್ ಗೆ ಕಳುಹಿಸಬೇಕಾಗಿತ್ತು. ಸ್ವಲ್ಪ ತಡವಾಗಿದೆ. ಡಿ. 30ರೊಳಗೆ ಲಿಸ್ಟ್ ಕಳುಹಿಸಬೇಕಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ನಗರದ ಕಾಂಗ್ರೆಸ್ ಕಚೇರಿ ಎದುರು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿಜಯಪುರ ಲೋಕಸಭಾ ಕ್ಷೇತ್ರಕ್ಕೆ ಸ್ಪರ್ಧಿಸಲು ಇಚ್ಛಿಸುವ ಆಕಾಂಕ್ಷಿಗಳ ಅರ್ಜಿ ಪಡೆಯಲು ವೀಕ್ಷಕನಾಗಿ ಇಲ್ಲಿಗೆ ಬಂದಿದ್ದೇನೆ ಎಂದರು.

ಡಿಸಿಎಂ ಸ್ಥಾನಕ್ಕೆ ಹೈಕಮಾಂಡ್ ಎದುರು ಬೇಡಿಕೆ ಇಟ್ಟಿದಿರಾ.? ಎಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಡಿಸಿಎಂ ಸ್ಥಾನದ ಬಗ್ಗೆ ಚರ್ಚೆ ಮಾಡಿಲ್ಲ. ಮುಂದೆ ಬಂದಾಗ ನೋಡೋಣ. ನಾನು ಹಿಂದೆನೂ ರೆಬಲ್ ಇಲ್ಲಾ, ಮುಂದೆನೂ ರೆಬಲ್ ಇಲ್ಲಾ, ಈಗಾಗಲೇ ಸಚಿವನಾಗಿ ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆಂದು ಹೇಳಿದರು.

ಇನ್ನು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಸರ್ಕಾರ ಬಿಳುತ್ತದೆ ಎಂಬ ಹೇಳಿಕೆ ಬಗ್ಗೆ ಮಾತನಾಡಿದ ಸಚಿವ ಸತೀಶ್, ಹೆಚ್.ಡಿ. ಕುಮಾರಸ್ವಾಮಿ ಅವರು, ಸರ್ಕಾರ ಈಗ ಬಿಳುತ್ತೆ, ಇನ್ನು ಆರು ತಿಂಗಳು ಬಿಟ್ಟು ಬಿಳುತ್ತೆ ಎಂತಾ ಹಾಗೆ ಐದು ವರ್ಷಗಳ ಕಾಲ ಹೇಳುತ್ತಾ ಇರುತ್ತಾರೆ. ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರ ಐದು ವರ್ಷ ಸುಭದ್ರವಾಗಿ ಇರುತ್ತದೆ ಎಂದರು.

ಬಿಎಸ್ ವೈ ಆಡಳಿತದಲ್ಲಿ 40 ಸಾವಿರ ಕೋಟಿ ರೂ. ಅವ್ಯವಹಾರ ನಡೆದಿದೆ ಎಂಬ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಆರೋಪಕ್ಕೆ ಪ್ರತಿಕ್ರಿಯೆ ನೀಡಿ, ಈಗಾಗಲೇ ಸರ್ಕಾರದಿಂದ ತನಿಖೆ ನಡೆಯುತ್ತಿದ್ದು, ವರದಿ ಬಂದ ಬಳಿಕ ಎಷ್ಟು ಸಾವಿರ ಕೋಟಿ ರೂ. ಅವ್ಯವಹಾರ ನಡೆದಿದೆ ಎಂಬುವುದು ಗೊತ್ತಾಗಲಿದೆ ಎಂದ ಅವರು, ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ವಿಚಾರವಾಗಿ ಪ್ರತಿಕ್ರಿಯಿಸಿ, ಎರಡು ಶಕ್ತಿ ಒಂದಾದ ಕುರಿತಾಗಿ ವಿಚಾರ ಮಾಡಲೇಬೇಕಾಗುತ್ತದೆ. ಅದರ ಬಗ್ಗೆ ಪರಿಣಾಮಕಾರಿಯಾಗಿ ಚರ್ಚೆ ಮಾಡಬೇಕಿದೆ ಎಂದು ತಿಳಿಸಿದರು.

**ಟಿಕೆಟ್ ಆಕಾಂಕ್ಷಿಗಳ ಜತೆಗೆ ಸಭೆ :** ನಂತರ ವಿಜಯಪುರ ನಗರದ ಕಾಂಗ್ರೆಸ್ ಕಚೇರಿಯಲ್ಲಿ ಮುಂಬರುವ ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಸಚಿವ ಸತೀಶ್ ಜಾರಕಿಹೊಳಿಯವರು ವೀಕ್ಷಕರಾಗಿ ಪಾಲ್ಗೊಂಡು, ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯ ಆಯ್ಕೆಯ ಕುರಿತು ಟಿಕೆಟ್ ಆಕಾಂಕ್ಷಿಗಳ ಜತೆಗೆ ಸಭೆ ನಡೆಸಿದರು.

ಈ ಸಂದರ್ಭದಲ್ಲಿ ಸಚಿವರಾದ ಶಿವಾನಂದ ಪಾಟೀಲ್, ಶಾಸಕರಾದ ಯಶವಂತರಾಯಗೌಡಾ ಪಾಟೀಲ್, ಸಿ.ಎಸ್. ನಾಡಗೌಡ, ಅಶೋಕ ಮನಗೂಳಿ, ಮಾಜಿ ಶಾಸಕರಾದ ಮನೋಹರ, ಮಕ್ಬುಲ್ ಬಾಗವಾನ, ಮುಖಂಡರಾದ ಅಬ್ದುಲ್ ಹಮೀದ್ ಶರೀಫ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ರಾಜು ಅಲಗೂರ, ಪಕ್ಷದ ಮುಂಚೂಣಿ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಟಿಪ್ಪು ಜಯಂತಿಯಲ್ಲಿ ಸನ್ಮಾನ ಸ್ವೀಕರಿಸಿದ್ದ ಯತ್ನಾಳ 3ನೇ ಟಿಪ್ಪು ಸುಲ್ತಾನ: ಎಂ.ಬಿ. ಪಾಟೀಲ



ವಿಜಯಪುರ: ಸಿಎಂ ಸಿದ್ದರಾಮಯ್ಯ ಎರಡನೇ ಟಿಪ್ಪು ಸುಲ್ತಾನ್ ಎಂಬ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳರ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ಸಚಿವ ಎಂ.ಬಿ. ಪಾಟೀಲ, 'ಶಾಸಕ ಯತ್ನಾಳ ಮೂರನೇ ಟಿಪ್ಪು ಸುಲ್ತಾನ್' ಎಂದು ತಿರುಗೇಟು ನೀಡಿದರು.

ಇಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಸಚಿವರು, 'ಟಿಪ್ಪು ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಯತ್ನಾಳ ಅವರನ್ನು ಸನ್ಮಾನಿಸಿದ ಚಿತ್ರಗಳಿವೆ. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಶಾಸಕ ಯತ್ನಾಳ ಮೂರನೇ ಟಿಪ್ಪು ಸುಲ್ತಾನ್' ಎಂದರು.

'ಟಿಪ್ಪು ಬ್ರಿಟಿಷರ ವಿರುದ್ಧ ಹೋರಾಡಿದ್ದು ಸತ್ಯ. ಆ ಇತಿಹಾಸವನ್ನು ಅಳಿಸಿಹಾಕಲು ಯಾರಿಂದಲೂ ಸಾಧ್ಯವಿಲ್ಲ. ಆದರೆ, ಸ್ವಾತಂತ್ರ್ಯ ಹೋರಾಟದಲ್ಲಿ ಬಿಜೆಪಿ, ಆರ್‌ಎಸ್‌ಎಸ್ ಸಂಘಟನೆಯವರ ಪಾತ್ರವಿಲ್ಲ. ಅವರೆಲ್ಲರೂ ಬ್ರಿಟಿಷರ ಪರ ಇದ್ದರು' ಎಂದರು.

'ಶಾಲೆ- ಕಾಲೇಜುಗಳಲ್ಲಿ ಜಾತಿ, ಧರ್ಮದ ವಿಷಯ ಬರಬಾರದು. ಹಿಜಾಬ್ ಗದ್ದಲ ಬರುವ ಮುಂಚೆ ಶಾಲೆ-ಕಾಲೇಜು ಹೇಗಿದ್ದವೋ ಹಾಗೆಯೇ ಇರಲಿ' ಎಂದರು.

## ಚಲಿಸುತ್ತಿದ್ದಾಗಲೇ ಹೊತ್ತಿ ಉರಿದ ಕಾರು: ಚಾಲಕ ಸಜೀವ ದಹನ



ಬೆಂಗಳೂರು: ರಸ್ತೆಯಲ್ಲಿ ಚಲಿಸುತ್ತಿದ್ದ ಮಾರುತಿ ಕಾರು ಇದ್ದಕ್ಕಿದ್ದಂತೆ ಹೊತ್ತಿ ಉರಿದಿರುವ ಘಟನೆ ನೆಲಮಂಗಲದ ಟೋಲ್ ಬಳಿ ನಡೆದಿದೆ.

ಧಗಧಗನೇ ಉರಿಯುತ್ತಿದ್ದ ಬೆಂಕಿಯಿಂದ ತಪ್ಪಿಸಿಕೊಳ್ಳಲು ಕಾರು ಚಾಲಕ ಸಾಕಷ್ಟು ಪ್ರಯತ್ನ ಪಟ್ಟಿದ್ದಾರೆ. ಆದರೆ ನೋಡ ನೋಡುತ್ತಲೇ ಬೆಂಕಿ ಸಂಪೂರ್ಣ ಆವರಿಸಿಕೊಂಡಿದ್ದು ಕಾರು ಚಾಲಕ ಸುಟ್ಟು ಕರಕಲಾಗಿದ್ದಾರೆ.

ನೆಲಮಂಗಲದ ಟೋಲ್ ಬಳಿ ಇರುವ ಪಾರ್ಲೆ ಜಿ ಬಳಿ ಈ ದಾರುಣ ಘಟನೆ ನಡೆದಿದೆ.

ನೋಡ ನೋಡುತ್ತಲೇ ಮಾರುತಿ ಕಾರಿಗೆ ಸಂಪೂರ್ಣ ಬೆಂಕಿ ಆವರಿಸಿಕೊಂಡಿದ್ದು ಸುಟ್ಟು ಕರಕಲಾಗಿದೆ. ಸ್ಥಳಕ್ಕೆ ಅಗ್ನಿ ಶಾಮಕದಳದ ಸಿಬ್ಬಂದಿ ಆಗಮಿಸಿದ್ದು, ಬೆಂಕಿ ಆರಿಸಿದ್ದಾರೆ.

## ಸರ್ಕಾರಿ ಬಸ್ ಪಲ್ಟಿಯಾಗಿ 45 ಮಕ್ಕಳಿಗೆ ಗಾಯ



ಹಾವೇರಿ: ಶಾಲಾ ವಿದ್ಯಾರ್ಥಿಗಳು ಪ್ರವಾಸಕ್ಕೆ ಹೊರಟ್ಟಿದ್ದ KSRTC ಬಸ್ ಪಲ್ಟಿಯಾದ ಘಟನೆ ಜಿಲ್ಲೆಯ ಸವಣೂರು ತಾಲೂಕಿನ ಬೇವಿನಹಳ್ಳಿ ಕ್ರಾಸ್ ಬಳಿ ನಡೆದಿದೆ. ಎದುರಿಗೆ ವೇಗವಾಗಿ ಬಂದ ಕಾರು ತಪ್ಪಿಸಲು ಹೋದಾಗ ಬಸ್ ಪಲ್ಟಿಯಾಗಿದೆ.

ಬಸ್ ಚಾಲಕ ಸೇರಿ ಮೂವರು ವಿದ್ಯಾರ್ಥಿಗಳಿಗೆ ಗಂಭೀರವಾಗಿ ಗಾಯವಾಗಿದೆ. ಡ್ರೈವರ್ ಮಲಪ್ಪ ಹೊಸೂರು ಅವರ ಬೆನ್ನು ಮುಳೆ ಮುರಿತಗೊಂಡಿದೆ. ವಿವ್ಯಾ ಸಜ್ಜನಗುಡ್ಡ, ಸವಿತಾರವಿ ರೆಡ್ಡಿ, ಗುರುನಗೌಡ ಎಂಬ ಮಕ್ಕಳು ಗಂಭೀರವಾಗಿ ಗಾಯಗೊಂಡಿದ್ದಾರೆ.

ರಾಯಚೂರು ಜಿಲ್ಲೆ ಲಿಂಗಸೂರ ತಾಲೂಕಿನ ಸಜ್ಜಲಗುಡ್ಡದ ಹಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು ಪ್ರವಾಸಕ್ಕೆ ಬಂದಿದ್ದರು. 53 ವಿದ್ಯಾರ್ಥಿಗಳು ಹಾಗೂ 6 ಶಿಕ್ಷಕರು KSRTC ಬಸ್ಸಿನಲ್ಲಿದ್ದರು.

ಈಶಾನ್ಯ ಕರ್ನಾಟಕ ಸಾರಿಗೆ ಸಂಸ್ಥೆಗೆ ಸೇರಿ ಸರ್ಕಾರಿ ಬಸ್ ಆಗಿದೆ. ಶಿಗ್ಗಾಂವಿ ತಾಲೂಕಿನ ಗೊಟಗೋಡಿ ರಾಕ್ ಗಾರ್ಡನ್ ವೀಕ್ಷಿಸಲು ಬಂದಿದ್ದರು. ಗಾಯಗೊಂಡ ವಿದ್ಯಾರ್ಥಿಗಳಿಗೆ ಸವಣೂರು ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಗಂಭೀರವಾಗಿ ಗಾಯಗೊಂಡಿರುವ ಚಾಲಕ ಮತ್ತು ವಿದ್ಯಾರ್ಥಿಗಳಿಗೆ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಸವಣೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದುರ್ಘಟನೆ ನಡೆದಿದೆ.

## ಅನಧಿಕೃತ ಅಂಗಡಿ-ಶೆಡ್ ತೆರವಿಗೆ ಕೈ ಕಾರ್ಯಕರ್ತರ ಒತ್ತಾಯ



ಹುಕ್ಕೇರಿ: ಪಟ್ಟಣದ ಕೋರ್ಟ್ ಸರ್ಕಲ್ ಬಳಿ ಅನಧಿಕೃತವಾಗಿ ನಿರ್ಮಿಸಿರುವ ಅಂಗಡಿ, ಶೆಡ್ ತೆರವುಗೊಳಿಸುವಂತೆ ಕಾಂಗ್ರೆಸ್ ಕಾರ್ಯಕರ್ತರು ಸಚಿವ ಭೈರತಿ ಸುರೇಶ ಅವರಿಗೆ ಮನವಿ ಸಲ್ಲಿಸಿದರು.

ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ ಅವರನ್ನು ಭೇಟಿ ಮಾಡಿದ ಕಾಂಗ್ರೆಸ್ ಕಾರ್ಯಕರ್ತರ ನಿಯೋಗವು, ಹುಕ್ಕೇರಿ ಪಟ್ಟಣದ ಕೋರ್ಟ್ ಸರ್ಕಲ್ ಬಳಿ ಪುರಸಭೆಯಿಂದ ಯಾವುದೇ ರೀತಿಯ ಪರವಾನಗಿ ಪಡೆಯದೇ ಮತ್ತು ಟ್ರೇಡ್ ಲೈಸನ್ಸ್ ಇಲ್ಲದೇ ನಿರ್ಮಿಸಿರುವ ರಾಘವೇಂದ್ರ ವೈಭವ ಹೊಟೆಲ್‌ನ್ನು ಕೂಡಲೇ ತೆರವುಗೊಳಿಸುವಂತೆ ಒತ್ತಾಯಿಸಿದರು.

ಕೋರ್ಟ ಸರ್ಕಲ್ ಬಳಿ ಸರ್ಕಾರಿ ರಸ್ತೆಯನ್ನೇ ಅತಿಕ್ರಮಣ ಮಾಡಿ ಅನಧಿಕೃತವಾಗಿ ರಾಘವೇಂದ್ರ ವೈಭವ್ ಹೋಟೆಲ್ ಹಾಗೂ ಪಾನ ಶಾಪ್ ಅಂಗಡಿ ತೆರೆಯಲಾಗಿದೆ. ಪಾದಚಾರಿ ರಸ್ತೆಯಲ್ಲಿ ಈ ಎರಡು ಅಂಗಡಿಗಳಿದ್ದು ವಾಹನ ಮತ್ತು ಜನ ಸಂಚಾರಕ್ಕೆ ಸಾಕಷ್ಟು ತೊಂದರೆಯಾಗುತ್ತಿದೆ. ಈ ಕುರಿತು ಪುರಸಭೆಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಕಾಂಗ್ರೆಸ್ ಕಾರ್ಯಕರ್ತರು ದೂರಿದರು.

ರಿಸನಂ.186ಎ/3, 188, 189ರ ಬೆಳವಿ ರಸ್ತೆಯನ್ನು ಅತಿಕ್ರಮಣ ಮಾಡಿಕೊಂಡು ಕಟ್ಟಡ ಕಟ್ಟಲಾಗಿದೆ. ಜತೆಗೆ ಬೋರವೆಲ್ ಕೂಡ ಕೊರೆಯಿಸಲಾಗಿದೆ. ಪುರಸಭೆಯ ನಳ ಸಂಪರ್ಕವನ್ನೂ ಅನಧಿಕೃತವಾಗಿ ಪಡೆಯಲಾಗಿದೆ. ಸರ್ಕಾರಕ್ಕೆ ವಂಚನೆ ಮಾಡಿರುವ ಈ ಅಂಗಡಿಕಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕಾರ್ಯಕರ್ತರ ಅಹವಾಲು ಆಲಿಸಿ, ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ಭೈರತಿ ಸುರೇಶ, ಅಲ್ಲಿಂದಲೇ ಫೋನ್ ಮೂಲಕ ಮುಖ್ಯಾಧಿಕಾರಿ ಕಿಶೋರ ಬೆನ್ನಿ ಅವರನ್ನು ಸಂಪರ್ಕಿಸಿ 15 ದಿನದೊಳಗೆ ಅನಧಿಕೃತ ಕಟ್ಟಡ ತೆರವುಗೊಳಿಸಿ ವರದಿ ಒಪ್ಪಿಸುವಂತೆ ಆದೇಶಿಸಿದರು.

ಕೆಪಿಸಿಸಿ ಪ್ರಚಾರ ಸಮಿತಿ ಚಿಕ್ಕೋಡಿ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ, ಮುಖಂಡರಾದ ಮೌನೇಶ ಪೋತದಾರ, ಪ್ರಕಾಶ ಪಟ್ಟಣಶೆಟ್ಟಿ, ಆನಂದ ಘೀರ್ಲಿ ಮತ್ತಿತರರು ಉಪಸ್ಥಿತರಿದ್ದರು.

## ಬಿಡುಗಡೆಗೂ ಮುನ್ನ ದಾಖಲೆ ಮಾಡಿದ 'ಕಾಟೇರ' ಚಿತ್ರ



ಬೆಂಗಳೂರು: ನಟ ದರ್ಶನ್ ನಟನೆಯ 'ಕಾಟೇರ' ಸಿನಿಮಾದ ಬಿಡುಗಡೆಗೆ ಸರ್ವ ರೀತಿಯಲ್ಲೂ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಇದೇ ಡಿ.29ರಂದು ರಾಜ್ಯದಾದ್ಯಂತ ಸಿನಿಮಾ ರಿಲೀಸ್ ಆಗುತ್ತಿದ್ದು, ಈಗಾಗಲೇ ಬುಕ್ ಮೈ ಶೋನಲ್ಲಿ ಮುಂಗಡ ಟಿಕೆಟ್ ಅನ್ನು ಖರೀದಿಸಬಹುದಾಗಿದೆ.

ಟಿಕೆಟ್ ಬುಕ್ಕಿಂಗ್ ಶುರುವಾಗಿ ಕೇವಲ 72 ಗಂಟೆಗಳಲ್ಲಿ ಬರೋಬ್ಬರಿ 50 ಸಾವಿರ ಟಿಕೆಟ್ ಸೇಲ್ ಆಗಿದೆ ಎನ್ನುವ ಮಾಹಿತಿ ಸಿಕ್ಕಿದೆ. ಮುಂಗಡ ಟಿಕೆಟ್ ಬುಕ್ಕಿಂಗ್ ಶುರುವಾಗಿ 48 ಗಂಟೆಗಳಲ್ಲಿ ಒಂದು ಕೋಟಿ ರೂಪಾಯಿಗೂ ಅಧಿಕ ಕಲೆಕ್ಷನ್ ಆಗಿದೆ ಎನ್ನುವ ಮಾಹಿತಿ ಹರಿದಾಡುತ್ತಿದೆ.

ಒಂದು ಕಡೆ ಕಲೆಕ್ಷನ್ ನಿಂದಾಗಿ ಸಿನಿಮಾ ಸುದ್ದಿ ಮಾಡುತ್ತಿದ್ದರೆ, ಮತ್ತೊಂದು ಕಡೆ ಆಯ್ಕೆ ಮಾಡಿಕೊಂಡ ಕಥೆಯ ಕಾರಣದಿಂದಾಗಿ ಸಿನಿಮಾ ಕುತೂಹಲ ಮೂಡಿಸಿದೆ.

ಇತ್ತೀಚೆಗಷ್ಟೇ ಹುಬ್ಬಳ್ಳಿಯಲ್ಲಿ ನಡೆದ ಟ್ರೈಲರ್ ಬಿಡುಗಡೆ ಸಮಾರಂಭದಲ್ಲಿ ನಟ ದರ್ಶನ್ ಸಿನಿಮಾ ಕುರಿತಾದ ಹಲವು ಸಂಗತಿಗಳನ್ನು ಹಂಚಿಕೊಂಡಿದ್ದಾರೆ. ಈ ಸಿನಿಮಾದ ಕಥೆಯು ನೈಜ ಘಟನೆಯನ್ನು ಆಧರಿಸಿದ್ದು, ಅದು ಇಂದಿರಾ ಗಾಂಧಿ ಕಾಲದ ಕಥೆಯಾಗಿದೆ ಎಂದು ಗುಟ್ಟು ಬಿಟ್ಟುಕೊಟ್ಟಿದ್ದಾರೆ.

ಅದು 1974ರ ಕಾಲ. ಉಳುವವನೆ ಭೂಮಿಯ ಒಡೆಯ ಕಾನೂನು ಬಂದಾಗ ನಡೆದಿರುವ ಘಟನೆ. ಆವಾಗ ಬಾವಿಯೊಂದರಲ್ಲಿ ತುಂಬಾ ಜನರ ಮೂಳೆಗಳು ಸಿಕ್ಕಿದ್ದವು. ಆ ಮೂಳೆಗಳು ಯಾರವು ಅಂತ ಯಾರಿಗೂ ಗೊತ್ತಿಲ್ಲ. ಆ ಕಹಿ ಘಟನೆಯನ್ನು ಈ ಸಿನಿಮಾದಲ್ಲಿ ಹೇಳಲು ಹೊರಟಿದ್ದೇವೆ ಎಂದಿದ್ದಾರೆ ದರ್ಶನ್.

ರಾಕ್‌ಲೈನ್ ವೆಂಕಟೇಶ್ ನಿರ್ಮಾಣದ, ತರುಣ್ ಸುದೀರ್ ನಿರ್ದೇಶನದ ಕಾಟೇರ ಚಿತ್ರ ಇದೇ ತಿಂಗಳು 29ಕ್ಕೆ ತೆರೆಗೆ ಬರಲು ಸಿದ್ಧವಾಗಿದೆ. ನಟ ದರ್ಶನರ ಬಹು ನಿರೀಕ್ಷಿತ ಚಿತ್ರ ಇದಾಗಿದ್ದು, ಈಗಾಗಲೇ ಚಿತ್ರ ಭಾರೀ ಹೈಪ್ ಕ್ರಿಯೆಟ್ ಮಾಡಿದೆ. ಬಹಳ ದಿನಗಳ ಬಳಿಕ ಡಿ ಬಾಸ್ ಮಾಸ್ ಲುಕ್ ನಲ್ಲಿ ಕಾಣಿಸಿಕೊಂಡಿದ್ದಾರೆ. ಟೀಸರ್ ಮತ್ತು ಸಾಂಗ್ ಯೂಟ್ಯೂಬ್‌ನಲ್ಲಿ ಸೆನ್ಸೇಷನ್ ಕ್ರಿಯೇಟ್ ಮಾಡಿದೆ. ಚಿತ್ರ ಬಿಡುಗಡೆಗೆ ದಿನಗಣನೆ ಆರಂಭವಾಗಿದೆ. ಈ ನಡುವೆ ವಾಣಿಜ್ಯ ನಗರಿಯಲ್ಲಿ ಅದ್ಧೂರಿಯಾಗಿ ಟ್ರೈಲರ್ ಬಿಡುಗಡೆಗೊಳಿಸಲಾಗಿದೆ.

## ಜನಜಂಗುಳಿ ಇರುವ ಕಡೆ ಪ್ರತಿಯೊಬ್ಬರು ಮಾಸ್ಕ್ ಹಾಕಿ: ಸಚಿವ ಗುಂಡೂರಾವ್ ಸಲಹೆ



ಬೆಂಗಳೂರು: ರಾಜ್ಯದಲ್ಲಿ ಬರೋಬ್ಬರಿ 34 ಜನರಿಗೆ ಕೊರೊನಾ ರೂಪಾಂತರಿ ಜೆನ್.1 ಪತ್ತೆಯಾಗಿದೆ. ಕೊರೊನಾಗೆ ಮೂವರು ಸಾವನ್ನಪ್ಪಿದ ಬೆನ್ನಲ್ಲೆ ರಾಜ್ಯ ಸರ್ಕಾರ ಫುಲ್ ಅಲರ್ಟ್ ಆಗಿದೆ.

ಈ ಬಗ್ಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಕ್ಯಾಬಿನೆಟ್ ಸಬ್ ಕಮಿಟಿ ಸಭೆ ನಡೆಸಿದ್ದಾರೆ.

ಈ ಬಗ್ಗೆ ಮಾಹಿತಿ ಹಂಚಿಕೊಂಡಿರೋ ಸಚಿವ ದಿನೇಶ್ ಗುಂಡೂರಾವ್, ಹೊಸ ಮಾರ್ಗಸೂಚಿ ಪ್ರಕಾರ ಸಾರ್ವಜನಿಕರು ಮಾಸ್ಕ್ ಹಾಕಿಕೊಳ್ಳುವುದು ಅವಶ್ಯಕತೆ ಇದೆ. 60 ವರ್ಷಗಳ ಮೇಲ್ಪಟ್ಟವರು ಮಾಸ್ಕ್ ಹಾಕಬೇಕು.

ಶಾಲಾ ಮಕ್ಕಳಿಗೆ ಜ್ವರ, ಕೆಮ್ಮು, ನೆಗಡಿ ಬಂದರೆ ಅವರಿಗೆ ಶಾಲೆಗಳಿಗೆ ಕಳಿಸಬೇಡಿ ಎಂದು ಪೋಷಕರಿಗೆ ಸಲಹೆ ನೀಡಿದ್ದಾರೆ. ಹೊಸ ಮಾರ್ಗಸೂಚಿಯಲ್ಲಿ ಕೋವಿಡ್ ಸೋಂಕು ತಗುಲಿದ್ರೆ ಒಂದು ವಾರ ಹೋಮ್ ಐಸೋಲೇಷನ್ ಕಡ್ಡಾಯಗೊಳಿಸುವ ಸಾಧ್ಯತೆ ಇದೆ.

ಹೀಗೆ ಮಾತು ಮುಂದುವರೆಸಿದ ಅವರು, ಎಲ್ಲರೂ ಸಾಮಾಜಿಕ ಅಂತರ ಕಾಪಾಡಿಕೊಳ್ಳಿ. ಜನಜಂಗುಳಿ ಇರುವ ಕಡೆ ಮಾಸ್ಕ್ ಹಾಕಿ, ಸ್ಯಾನಿಟೈಜರ್ ಬಳಸಿ. ಕೋವಿಡ್ ಬಂದವರು ಮನೆಯಲ್ಲಿ ಇರಬೇಕು. ಖಾಸಗಿ ಕಂಪನಿಗಳಿಗೆ 7 ದಿನ ರಜೆ ನೀಡಬೇಕು.

ಯಾವುದೇ ರೀತಿ ಆತಂಕ ಪಡುವ ಅವಶ್ಯಕತೆ ಇಲ್ಲ. ಜೆಎನ್.1ನಿಂದ ಹೈ ರಿಸ್ಕ್ ಇಲ್ಲ. ಆದರೂ ನಾವು ಎಲ್ಲ ಮುಂಜಾಗ್ರತಾ ಕ್ರಮ ತೆಗೆದುಕೊಂಡಿದ್ದೇವೆ.

ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ನಿಯಮ ಪಾಲನೆ ಕ್ರಮ ತೆಗೆದುಕೊಳ್ಳುತ್ತೇವೆ.

ಖಾಸಗಿ ಆಸ್ಪತ್ರೆಗಳಿಗೆ ಕೋವಿಡ್ ಟೆಸ್ಟ್ ಎರಡು ದಿನಗಳಲ್ಲಿ ದರ ನಿಗದಿ ಮಾಡುತ್ತೇವೆ. ಸಿಎಂ ಬೇಕಾದಷ್ಟು ಅನುದಾನ ನೀಡುತ್ತೇವೆ.

ಅಂತಾರಾಷ್ಟ್ರೀಯ, ಅಂತರಾಜ್ಯಕ್ಕೆ ಪ್ರವಾಸಕ್ಕೆ ಯಾವುದೇ ನಿರ್ಬಂಧ ಇಲ್ಲ. ಇಂದು ಸಂಜೆ ಎಲ್ಲ ಮಾಹಿತಿ ಬಿಡುಗಡೆ ಮಾಡುತ್ತೇವೆ. ಸಂಜೆ ಹೊಸ ಮಾರ್ಗಸೂಚಿ ಬಿಡುಗಡೆ ಮಾಡ್ತೀವಿ.

ವ್ಯಾಕ್ಸಿನ್ ಕಡ್ಡಾಯವಾಗಿ ತೆಗೆದುಕೊಳ್ಳಿ ಅಂತ ಹೇಳಲ್ಲ. ನಿಮ್ಮ ಆರೋಗ್ಯ ನಿಮ್ಮ ಕೈಯಲ್ಲಿದೆ ಎಂದು ಹೇಳಿದ್ದಾರೆ.

# ಏಪ್ರಿಲ್ ವೇಳೆಗೆ 1400 ಹೊಸ ಎಲೆಕ್ಟ್ರಿಕ್ ಬಸ್ ಗಳು ನಗರ ಸಾರಿಗೆಗೆ ಸೇರ್ಪಡೆ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಏಪ್ರಿಲ್ ವೇಳೆಗೆ 1400 ಹೊಸ ಎಲೆಕ್ಟ್ರಿಕ್ ಬೆಂಗಳೂರು ಮಹಾನಗರ ಬಸ್ ಗಳು ನಗರ ಸಾರಿಗೆಗೆ ಸೇರ್ಪಡೆ ಆಗಲಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ವಿಧಾನಸೌಧದ ಪೂರ್ವದ್ವಾರದ ಮುಂಭಾಗದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 100 ವಿದ್ಯುತ್ ಚಾಲಿತ ಬಸ್ ಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಇಲ್ಲಿಯವರೆಗೂ ರಾಜ್ಯ ಸಾರಿಗೆಯ ಬಸ್ ಗಳಲ್ಲಿ 120 ಕೋಟಿ ಮಹಿಳೆಯರು ಉಚಿತವಾಗಿ ಬಸ್ ಗಳಲ್ಲಿ ಪ್ರಯಾಣಿಸಿದ್ದಾರೆ.

ನಿತ್ಯ 40 ಲಕ್ಷ ಜನ ಬಿಎಂಟಿಸಿ ಯಲ್ಲಿ ಪ್ರಯಾಣ. ಇದರಲ್ಲಿ ಎಲ್ಲ ಜಾತಿ, ಎಲ್ಲ ಧರ್ಮದ, ಎಲ್ಲ ಅಂತಸ್ತಿನ ಮಹಿಳೆಯರು ಉಚಿತ ಪ್ರಯಾಣ ಮಾಡುತ್ತಿದ್ದಾರೆ. ಉಚಿತ ಬಸ್ ಪ್ರಯಾಣವನ್ನು ಬಿಜೆಪಿ ಯವರು ಟೀಕಿಸುತ್ತಿದ್ದಾರೆ. ಆದರೆ ಬಿಜೆಪಿ ಯವರು ತಾವು ಅಧಿಕಾರದಲ್ಲಿದ್ದಾಗ ಈ ಜನೋಪಯೋಗಿ ಯೋಜನೆಯನ್ನು ಏಕೆ ಜಾರಿಗೆ ತರಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಬಿಜೆಪಿ ವಿಜಯೇಂದ್ರಗೆ ರಾಜ್ಯಾಧ್ಯಕ್ಷ ಪಟ್ಟ, ಆರ್.ಅಶೋಕ್ ವಿಪಕ್ಷ ಸ್ಥಾನ ತಾತ್ಕಾಲಿಕವೇ? ನಮ್ಮ ಗ್ಯಾರಂಟಿಗಳಿಂದ ಜನರ ಕೊಳ್ಳುವ ಶಕ್ತಿ ಹೆಚ್ಚಾಗಿ ರಾಜ್ಯದ ಆರ್ಥಿಕ ಚಟುವಟಿಕೆ ಹೆಚ್ಚಾಗಿ ರಾಜ್ಯದ ಆರ್ಥಿಕ ಬೆಳವಣಿಗೆ ಆಗುತ್ತಿದೆ. ಕಾರ್ಮಿಕ ಮತ್ತು ರೈತ ಮಹಿಳೆಯರು, ದುಡಿಯುವ ವರ್ಗಗಳ ಮಹಿಳೆಯರಿಗೆ ಇದರಿಂದ ಸಾಕಷ್ಟು ಹಣ ಉಳಿತಾಯವಾಗಿದೆ. ಆ ಹಣವನ್ನು ತಮ್ಮ ಕುಟುಂಬದ ಇತರೆ ಅಗತ್ಯಗಳಿಗೆ ಬಳಸುತ್ತಿದ್ದಾರೆ. ಹೀಗಾಗಿ ಲಕ್ಷಾಂತರ ಕುಟುಂಬಗಳ ಆರ್ಥಿಕ ಶಕ್ತಿಯೂ ಹೆಚ್ಚುತ್ತಿದೆ ಎಂದು ಸರ್ಕಾರದ ಜನೋಪಯೋಗಿ ಯೋಜನೆಯ ಪರಿಣಾಮಕಾರಿ ಫಲಿತಾಂಶವನ್ನು ವಿವರಿಸಿದರು.

ರಾಜ್ಯದ 4 ಕೋಟಿ 30 ಲಕ್ಷ ಮಂದಿ ನೇರವಾಗಿ ಸರ್ಕಾರದ ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆಯುತ್ತಿದ್ದಾರೆ. ಆ ಮೂಲಕ ಬಡವರು ಮತ್ತು ದುಡಿಯುವ ವರ್ಗಗಳನ್ನು ಆರ್ಥಿಕ ಪ್ರಗತಿಯ ಮುಖ್ಯವಾಹಿನಿಗೆ ತರಲಾಗುತ್ತಿದೆ ಎಂದರು. ಇನ್ನೂ ಆರ್ಥಿಕ ಶಕ್ತಿ ಮೂಲಕ ನಾಡಿನ ಸಮಸ್ತ ಮಹಿಳೆಯರಿಗೆ ಮತ್ತು ಬಡ, ಶ್ರಮಿಕ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಆರ್ಥಿಕ ಸ್ವಾತಂತ್ರ್ಯ ಲಭಿಸಿದೆ. ಇದನ್ನು ಸಾಧಿಸಲು ಕಾಂಗ್ರೆಸ್ ಸರ್ಕಾರವೇ ಬರಬೇಕಾಯಿತು. ಹಿಂದಿದ್ದ ಬಿಜೆಪಿ ಸರ್ಕಾರಗಳು ಇದನ್ನು ಸಾಧಿಸಲಿಲ್ಲ. ಬದಲಿಗೆ ಟೀಕಿಸುತ್ತಾ ಕುಳಿತಿವೆ ಎಂದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಘನ ಉಪಸ್ಥಿತರಿದ್ದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿವಾಜಿನಗರ ಶಾಸಕ ರಿಜ್ವಾನ್ ಅರ್ಷದ್ ವಹಿಸಿದ್ದರು. ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್, ಕ್ರೀಡಾ ಸಚಿವ ನಾಗೇಂದ್ರ, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ವಿಧಾನ ಪರಿಷತ್ ಸದಸ್ಯ ಯು.ಬಿ.ವೆಂಕಟೇಶ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ನಸೀರ್ ಅಹ್ಮದ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

# ಸಕ್ಕರೆ ಸಚಿವ ಹೇಳಿಕೆ ಖಂಡಿಸಿ ಬೆಳಗಾವಿಯಲ್ಲಿ ರೈತರ ಪ್ರತಿಭಟನೆ



ಬೆಳಗಾವಿ: ರೈತರು ಬರ ಬರಲಿ ಎಂದು ಬಯಸುತ್ತಾರೆ ಎಂಬ ಸಕ್ಕರೆ ಸಚಿವ ಶಿವಾನಂದ ಪಾಟೀಲ ಹೇಳಿಕೆಯನ್ನು ಖಂಡಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಹಾಗೂ ರೈತರು ನಗರದ ಎಸ್ .ನಿಜನಿಂಗಪ್ಪ ಸಕ್ಕರೆ ಸಂಸ್ಥೆ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ಇದಕ್ಕೂ ಮೊದಲು ಗಣೇಶಪುರ ರಸ್ತೆಯಲ್ಲಿರುವ ಎಸ್ .ನಿಜನಿಂಗಪ್ಪ ಸಕ್ಕರೆ ಸಂಸ್ಥೆ ಗೇಟ್ ಬಳಿ ಸೇರಿದ ಪ್ರತಿಭಟನಕಾರರು, ಶಿವಾನಂದ ಪಾಟೀಲ ವಿರುದ್ಧ ಘೋಷಣೆ ಕೂಗಿ ತಾವು ತಂದಿದ್ದ ಭಂಡಾರವನ್ನು ಎರಚಿ ಸಚಿವ ಶಿವಾನಂದ ಪಾಟೀಲರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಇದೇ ವೇಳೆ ಪೊಲೀಸರು ರೈತ ಮುಖಂಡರನ್ನು ವಶಕ್ಕೆ ಪಡೆದರು.

ಈ ವೇಳೆ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಚುನಪ್ಪ ಪೂಜಾರಿ ಮಾತನಾಡಿ, ರಾಜ್ಯ, ರಾಷ್ಟ್ರಮಟ್ಟದಲ್ಲಿ ರೈತ ದಿನಾಚರಣೆ ಆಚರಿಸಿ, ರೈತ ದೇಶದ ಬೆನ್ನೆಲುಬು, ದೇಶಕ್ಕೆ ಅನ್ನ ನೀಡುವ ಅನ್ನದಾತ ಎಂದು ಹೊಗಳುತ್ತಿರುವ ಸಂದರ್ಭದಲ್ಲಿ ಸಕ್ಕರೆ ಸಚಿವ ಶಿವಾನಂದ ಪಾಟೀಲ ಅವರು, ರೈತರು ಬರಗಾಲ ಬರಬೇಕು ಎಂದು ಬಯಸುತ್ತಾರೆ, ಸಾಲ ಮನ್ನಾ ಮಾಡಿ ಎಂದು ಒತ್ತಾಯಿಸುತ್ತಾರೆ. ವಿದ್ಯುತ್ ಉಚಿತವಾಗಿ ನೀಡಲಾಗುತ್ತಿದೆ. ಗೊಬ್ಬರಕ್ಕೆ ಸಬ್ಸಿಡಿಯನ್ನೂ ಕೊಡಲಾಗುತ್ತಿದೆ. ಹಾಗಾಗಿ, ಸಾಲ ಮನ್ನಾ ಮಾಡುವುದನ್ನು ಅವರು ನಿರೀಕ್ಷಿಸಬಾರದು ಎಂದು ಹೇಳಿದ್ದಾರೆ. ಇದು ಅತ್ಯಂತ ಖಂಡನೀಯ. ಶಿವಾನಂದ ಪಾಟೀಲ ಅವರು ಮಾನಸಿಕ ಸ್ಥಿಮಿತ ಕಳೆದುಕೊಂಡು ಮಾತನಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ಸಿಎಂಸಿದ್ದರಾಮಯ್ಯ ಅವರು ಇತ್ತೀಚೆಗೆ ಅಧಿವೇಶನದಲ್ಲಿ ಮಾತನಾಡುವಾಗ, ರೈತರ ಕೃಷಿ ಪತ್ತಿನ ಸಹಕಾರ ಸಂಘದ ಸಾಲದ ಮೇಲಿನ ಸುಸ್ತಿ ಬಡ್ಡಿಯನ್ನು ಮನ್ನಾ ಮಾಡುತ್ತೇವೆ ಎಂದು ಹೇಳಿದ್ದರು. ಆಗ ಈ ಶಿವಾನಂದ ಪಾಟೀಲ ಎಲ್ಲಿದ್ದರು. ಆಗ ಇವರು ಪ್ರತಿಭಟನೆ ಮಾಡಬೇಕಿತ್ತು. ಕೇಂದ್ರ ಸರ್ಕಾರ ಕಾರ್ಪೊರೇಟ್ ಕಂಪನಿಗಳ ಸಾಲ ಮನ್ನಾ ಮಾಡಿದಾಗ ಇವರು ಎಲ್ಲಿ ಹೋಗಿದ್ದರು ಎಂದು ಪ್ರಶ್ನಿಸಿದ್ದರು.

ಸಚಿವ ಶಿವನಾಂದ ಪಾಟೀಲ ಅವರು ಕಳೆದ ವರ್ಷ ರೈತರ ಆತ್ಮಹತ್ಯೆ ವಿಚಾರದ ಬಗ್ಗೆಯೂ ಹಗುರವಾಗಿ ಮಾತನಾಡಿದ್ದರು. ಆಗ ಅವರಿಗೆ ತಕ್ಕ ಪಾಠ ಕಲಿಸಿದ್ದೆವು. ಪ್ರತಿ ಬಾರಿಯೂ ಅವರು ಇಂತಹದೇ ಹೇಳಿಕೆಯನ್ನು ನೀಡುತ್ತಿದ್ದಾರೆ. ರೈತರಿಗೆ ಅನುಕೂಲವಾಗುವ ಯೋಜನೆಯನ್ನು ಜಾರಿಗೆ ತರಲು ಇವರಿಗೆ ಆಗುವುದಿಲ್ಲ. ಹೆಚ್ಚುವರಿ ಕಬ್ಬು ಬಾಕಿಯನ್ನು ರೈತರಿಗೆ ಕೊಡಿಸಲು ಕ್ರಮ ಕಗೊಳ್ಳಲು ಸಾಧ್ಯವಾಗುವುದಿಲ್ಲ. ಆದರೆ, ಹಗುರವಾಗಿ ಮಾತನಾಡುತ್ತಾರೆ ಎಂದು ದೂರಿದರು.

ಸಚಿವರು ತಕ್ಷಣ ರೈತರ ಕ್ಷಮೆ ಕೇಳಬೇಕು. ಇಲ್ಲದಿದ್ದರೆ, ಅವರು ರಾಜ್ಯದಲ್ಲಿ ಎಲ್ಲಿಯೂ ಓಡಾಡುವುದಕ್ಕೆ ನಾವು ಬಿಡುವುದಿಲ್ಲ. ಮುಂದಿನ ದಿನಗಳಲ್ಲಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಹಾಗೂ ರೈತರು ಭಾಗವಹಿಸಿದ್ದರು.

# ದತ್ತ ಜನ್ಮೋತ್ಸವ ಉದ್ಘಾಟಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಜಾಂಬೋಟಿಯ ಶ್ರೀ ಮಂಜುನಾಥ ದುರ್ಗಾದೇವಿ ದತ್ತ ಮಂದಿರ ಟ್ರಸ್ಟ್ ಕಮೀಟಿಯ ವತಿಯಿಂದ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ 'ದತ್ತ ಜನ್ಮೋತ್ಸವ' ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಜನರು ಹೆಚ್ಚು ದೈವೀ ಭಕ್ತರಾಗಿದ್ದು, ಯಾವುದೇ ಕೆಲಸವನ್ನು ಮಾಡುವ ಮುನ್ನ ದೇವರನ್ನು ಸ್ಮರಿಸುತ್ತಾರೆ. ನಿತ್ಯ ದೇವರನ್ನು ಪೂಜಿಸುತ್ತಾರೆ. ಪ್ರತಿಯೊಂದು ಗ್ರಾಮದಲ್ಲೂ ಒಂದಿಲ್ಲೊಂದು ದೇವಸ್ಥಾನಗಳನ್ನು ನಿರ್ಮಾಣ ಮಾಡಿ ಆರಾಧಿಸುತ್ತಾರೆ. ನಾನು ಕೂಡ ದೈವೀ ಭಕ್ತಳಾಗಿದ್ದು, ನನ್ನ ಗ್ರಾಮೀಣ ಕ್ಷೇತ್ರದ ದೇವಸ್ಥಾನಗಳಿಗೆ ಅತೀ ಹೆಚ್ಚು ಅನುದಾನ ನೀಡಿದ್ದೇನೆ. ಜೊತೆಗೆ ದೇವರಿಗೆ ಸಂಬಂಧಿಸಿದ ಯಾವುದೇ ಕಾರ್ಯಕ್ರಮವನ್ನು ನಾನು ತಪ್ಪಿಸಿಕೊಳ್ಳುವುದಿಲ್ಲ ಎಂದು ತಿಳಿಸಿದರು.

# ಇಂಡಿಯಾ ಬುಕ್ ಆಫ್ ರೆಕಾರ್ಡ್ ಪ್ರಶಸ್ತಿ ಬಾಚಿಕೊಂಡ ಬೆಳಗಾವಿ ಪುಟಾಣಿ




ಬೆಳಗಾವಿ: ಬೆಳಗಾವಿ ನಗರದ ಸೆಂಟ್ ಜೋಸೆಫ್ ಶಾಲೆಯ 2ನೇ ತರಗತಿಯ ವಿದ್ಯಾರ್ಥಿನಿಯಾದ ಕುಮಾರಿ ಅನ್ವಿತಾ ರವೀಂದ್ರ ಗೋಕಾಕ ಇವಳು ಎರಡು ನಿಮಿಷಗಳಲ್ಲಿ ಪಿರಿಯಾಡಿಕ್ ಟೇಬಲ್ ಅನ್ನು ಕಂಠಪಾಠ ಮಾಡಿ ಸರಾಗವಾಗಿ ಹೇಳುವುದರ ಮೂಲಕ ಇಂಡಿಯಾ ಬುಕ್ ಆಫ್ ರೆಕಾರ್ಡ್ 2023ನಲ್ಲಿ ದಾಖಲೆ ಮಾಡಿದ್ದಾಳೆ.

ವಿದ್ಯಾರ್ಥಿನಿಗೆ ಶಾಲೆಯ ಪ್ರಾಚಾರ್ಯ, ಶಿಕ್ಷಕರು, ವಿದ್ಯಾರ್ಥಿಯ ಪೋಷಕರಾದ ರವೀಂದ್ರ ಗೋಕಾಕ ,ನಮಿತಾ ಕೋಲಕಾರ ಸಮಸ್ತ ಗೋಕಾಕ ಕುಟುಂಬ ಮತ್ತು ಕೋಲಕಾರ ಕುಟುಂಬದವರಿಂದ ವಿದ್ಯಾರ್ಥಿಗೆ ಅಭಿನಂದಿಸಿದ್ದಾರೆ.

# ನಕಲಿ ಬಿಲ್ ಸೃಷ್ಟಿ ಆರೋಪ: ನಿವೃತ್ತ ನ್ಯಾಯಾಧೀಶರಿಂದ ತನಿಖೆಗೆ ಸರಕಾರ ಆದೇಶ

ಬೆಂಗಳೂರು: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದ ಅಡಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಸುಳ್ಳು ಬಿಲ್ ಗಳನ್ನು ಸೃಷ್ಟಿಸಿ ಸರಕಾರಕ್ಕೆ ವಂಚಿಸಲಾಗಿದೆ ಎನ್ನುವ ಪ್ರಕರಣದ ಕುರಿತು ನಿವೃತ್ತ ನ್ಯಾಯಾಧೀಶರಿಂದ ಸ್ವತಂತ್ರ ತನಿಖೆ ನಡೆಸಲು ಸರಕಾರ ಆದೇಶ ಹೊರಡಿಸಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಸೂಚನೆಯ ಮೇರೆಗೆ ಸರಕಾರ ಈ ಕುರಿತು ಆದೇಶ ಹೊರಡಿಸಿದೆ. ಪ್ರಕರಣದ ಕುರಿತು ಸತ್ಯಾಸತ್ಯತೆ ಅರಿಯಲು ನಿಸ್ಪಕ್ಷಪಾತವಾದ ತನಿಖೆ ನಡೆಸಲು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ದಿಟ್ಟ ನಿರ್ಧಾರ ತೆಗೆದುಕೊಂಡಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಡಿಸೆಂಬರ್ 20ರ ಪತ್ರ ಆಧರಿಸಿ ಈ ಆದೇಶ ಹೊರಡಿಸಲಾಗಿದ್ದು, ನಿವೃತ್ತ ನ್ಯಾಯಾಧೀಶರಾದ ಎಚ್.ಜಿ. ನಾಗರತ್ನ ತನಿಖೆ ನಡೆಸಲಿದ್ದಾರೆ.

ಹಿಂದಿನ ಉಪನಿರ್ದೇಶಕ ಆರ್.ನಾಗರಾಜ ಮತ್ತು ಪ್ರಥಮ ದರ್ಜೆ ಸಹಾಯಕ ವಿಕ್ರಮ ಅವರು ಎಂಎಸ್ ಪಿಸಿಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳ ಮೇಲೆ ಪ್ರಭಾವ ಬೀರಿ, ಅಧಿಕಾರ ದುರ್ಬಳಕೆ ಮಾಡಿಕೊಂಡು ಬೆಳಗಾವಿ ಗ್ರಾಮೀಣ, ನಗರ, ಬೈಲಹೊಂಗಲ, ರಾಮದುರ್ಗ ಮತ್ತು ಸವದತ್ತಿ ತಾಲೂಕುಗಳ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದ ಅಡಿ ಅಕ್ರಮವಾಗಿ ಹಾಗೂ ಕಾನೂನು ಬಾಹಿರವಾಗಿ ಸುಳ್ಳು ಬಿಲ್ ಗಳನ್ನು ಸೃಷ್ಟಿಸಿ ಸರಕಾರಕ್ಕೆ 2 ಕೋಟಿ ರೂ.ಗಳಷ್ಟು ವಂಚಿಸಿದ್ದಾರೆ ಎಂದು ಆರೋಪಿಸಲಾಗಿದ್ದು, ಈ ಕುರಿತು ಕೆಲವು ಮಾಧ್ಯಮಗಳಲ್ಲಿ ಸಹ ವರದಿ ಭಿತ್ತರವಾಗಿತ್ತು.

ಕಳೆದ 2 ವರ್ಷಗಳಲ್ಲಿ ಕಾರ್ಯನಿರ್ವಹಿಸಿದ ಇಲಾಖೆಯ ಉಪ ನಿರ್ದೇಶಕರು ಅಧಿಕಾರ ದುರ್ಬಳಕೆ ಮಾಡಿಕೊಂಡು ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದಡಿ ಅಕ್ರಮವಾಗಿ ಹಾಗೂ ಕಾನೂನು ಬಾಹಿರವಾಗಿ ಸುಳ್ಳು ಬಿಲ್ಲುಗಳನ್ನು ತಯಾರಿಸಿ ಸರ್ಕಾರಕ್ಕೆ ವಂಚಿಸಿದ್ದಾರೆ ಎನ್ನಲಾದ ಪ್ರಕರಣದಲ್ಲಿ ಪ್ರಾಥಮಿಕವಾಗಿ ಸ್ವತಂತ್ರ ತನಿಖೆ ಕೈಗೊಳ್ಳಲು ನಿವೃತ್ತ ಜಿಲ್ಲಾ ಪ್ರಧಾನ ನ್ಯಾಯಾಧೀಶರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾನೂನು ಸಲಹೆಗಾರರಾದ ಹೆಚ್.ಜಿ. ನಾಗರತ್ನ ಇವರನ್ನು ತನಿಖಾಧಿಕಾರಿಯನ್ನಾಗಿ ನೇಮಿಸಿ ಮಂಗಳವಾರ ಆದೇಶಿಸಲಾಗಿದೆ.

# ದತ್ತ ಜನ್ಮೋತ್ಸವ ಉದ್ಘಾಟಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಜಾಂಬೋಟಿಯ ಶ್ರೀ ಮಂಜುನಾಥ ದುರ್ಗಾದೇವಿ ದತ್ತ ಮಂದಿರ ಟ್ರಸ್ಟ್ ಕಮೀಟಿಯ ವತಿಯಿಂದ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ 'ದತ್ತ ಜನ್ಮೋತ್ಸವ' ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಜನರು ಹೆಚ್ಚು ದೈವೀ ಭಕ್ತರಾಗಿದ್ದು, ಯಾವುದೇ ಕೆಲಸವನ್ನು ಮಾಡುವ ಮುನ್ನ ದೇವರನ್ನು ಸ್ಮರಿಸುತ್ತಾರೆ. ನಿತ್ಯ ದೇವರನ್ನು ಪೂಜಿಸುತ್ತಾರೆ. ಪ್ರತಿಯೊಂದು ಗ್ರಾಮದಲ್ಲೂ ಒಂದಿಲ್ಲೊಂದು ದೇವಸ್ಥಾನಗಳನ್ನು ನಿರ್ಮಾಣ ಮಾಡಿ ಆರಾಧಿಸುತ್ತಾರೆ. ನಾನು ಕೂಡ ದೈವೀ ಭಕ್ತಳಾಗಿದ್ದು, ನನ್ನ ಗ್ರಾಮೀಣ ಕ್ಷೇತ್ರದ ದೇವಸ್ಥಾನಗಳಿಗೆ ಅತೀ ಹೆಚ್ಚು ಅನುದಾನ ನೀಡಿದ್ದೇನೆ. ಜೊತೆಗೆ ದೇವರಿಗೆ ಸಂಬಂಧಿಸಿದ ಯಾವುದೇ ಕಾರ್ಯಕ್ರಮವನ್ನು ನಾನು ತಪ್ಪಿಸಿಕೊಳ್ಳುವುದಿಲ್ಲ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪರಮಪೂಜ್ಯ ಶ್ರೀ ಮಂಜುನಾಥ ಮಹಾರಾಜ, ಅರುಣ ಮಹಾರಾಜ, ಯುವರಾಜ ಕದಂ, ಗಂಗಣ್ಣ ಕಲ್ಲೂರ, ಬಿಜೆಪಿ ಮುಖಂಡರಾದ ಶಂಕರಗೌಡ ಪಾಟೀಲ, ಮಾಜಿ ತಾಲೂಕ ಪಂಚಾಯತ್ ಅಧ್ಯಕ್ಷ ಶಂಕರಗೌಡ ಪಾಟೀಲ, ರವಿ ಕಾಡಗಿ, ಸುನಿಲ್ ಹಂಜಿ, ಅಡಿವೇಶ್ ಇಟಗಿ ಜಿ.ಕೆ.ಪಾಟೀಲ, ರಘು ಖಂಡೇಕರ್ ಪ್ರದೀಪ್ ಪಾಟೀಲ, ಉಪಸ್ಥಿತರಿದ್ದರು.

# ಶೀಘ್ರವೇ 7,500 ಶಿಕ್ಷಕರ ನೇಮಕಾತಿ; ಶಿಕ್ಷಣ ಇಲಾಖೆಯಿಂದ ಘೋಷಣೆ



ಬೆಂಗಳೂರು: ಶಿಕ್ಷಣ ಇಲಾಖೆ ಶೈಕ್ಷಣಿಕ ವರ್ಷದಲ್ಲಿ ನಿವೃತ್ತರಾಗುತ್ತಿರುವ 5000 ಶಿಕ್ಷಕರಿಗೆ ಪರ್ಯಾಯವಾಗಿ 7,500 ಶಿಕ್ಷಕರ ನೇಮಕಾತಿಗೆ ಸಿದ್ಧತೆ ನಡೆಸಿದೆ.

2023ನೇ ಸಾಲಿನಲ್ಲಿ ನಿವೃತ್ತಿಯಿಂದ ತೆರವಾಗುವ 4985 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಶಿಕ್ಷಣ ಇಲಾಖೆ ಕೋರಿರುವ ಪ್ರಸ್ತಾವನೆಯು ಆರ್ಥಿಕ ಇಲಾಖೆ ಪರಿಶೀಲನೆ ನಡೆಸಿದೆ. ಹಿಂದಿನ ವರ್ಷದಲ್ಲಿ ಭರ್ತಿಯಾಗದೆ ಉಳಿದ 2,500 ಹುದ್ದೆಗಳ ಭರ್ತಿಗೆ ಇಲಾಖೆ ಸಿದ್ದತೆ ನಡೆಸಿದೆ.

2022–23ರ ಸಾಲಿನಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಆರರಿಂದ ಎಂಟನೇ ತರಗತಿಗಾಗಿ ಖಾಲಿಯಿದ್ದ 15 ಸಾವಿರ ಪದವೀಧರ ಪ್ರಾಥಮಿಕ ಶಿಕ್ಷಕರ ಹುದ್ದೆಗಳ ನೇಮಕಾತಿಗಾಗಿ ಪ್ರಕ್ರಿಯೆ ನಡೆಸಲಾಗಿತ್ತು.

ಈ ಪೈಕಿ 13352 ಅರ್ಹ ಅಭ್ಯರ್ಥಿಗಳು ಆಯ್ಕೆಯಾಗಿದ್ದು, ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ಒಟ್ಟು 12415 ಶಿಕ್ಷಕರನ್ನು ಕೌನ್ಸೆಲಿಂಗ್ ಮೂಲಕ ನೇಮಕ ಮಾಡಿಕೊಳ್ಳಲಾಗಿದೆ. ಇದರಲ್ಲಿ 2,500 ಹುದ್ದೆಗಳನ್ನು ಈಗ ತುಂಬಲು ಇಲಾಖೆ ನಿರ್ಧರಿಸಿದೆ.

ರಾಜ್ಯದಲ್ಲಿ 41,913 ಪ್ರಾಥಮಿಕ ಶಾಲೆಗಳಿದ್ದು,4844 ಪ್ರೌಢಶಾಲೆಗಳಿವೆ. ಪ್ರಾಥಮಿಕ ಶಾಲೆಗಳಲ್ಲಿ 188531 ಮಂಜೂರಾದ ಹುದ್ದೆಗಳಿವೆ. ಆದರೆ, ಕೇವಲ 148501 ಹುದ್ದೆಗಳು ತುಂಬಿದೆ. 40,030 ಖಾಲಿ ಹುದ್ದೆಗಳಿದ್ದು, ಪ್ರೌಢ ಶಾಲೆಗಳಲ್ಲಿ 44341 ಹುದ್ದೆಗಳಿದ್ದು, ಈಗ 34,186 ಹುದ್ದೆಗಳು ಭರ್ತಿಯಾಗಿದೆ.

ಈಗ ಇರುವ ಖಾಲಿ ಹುದ್ದೆಯಲ್ಲಿ 50000ಯಾಗಿದ್ದು, ಇವುಗಳ ಪೈಕಿ 7,500 ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆಯಾಗಿದೆ.

# ಜಿಲ್ಲೆಯಲ್ಲಿ ಯುವನಿಧಿ ಯೋಜನೆಗೆ ನೊಂದಣಿ ಆರಂಭ: ಅಪರ ಜಿಲ್ಲಾಧಿಕಾರಿ ಗೀತಾ ಸಿ. ಡಿ

ಧಾರವಾಡ: ಕರ್ನಾಟಕ ಸರ್ಕಾರದ 5 ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯು ಜಿಲ್ಲೆಯಲ್ಲಿ ಇಂದಿನಿಂದ ನೋಂದಾಣಿ ಪ್ರಕ್ರಿಯೆ ಆರಂಭವಾಗಿದೆ. ಸಂಬಂಧಪಟ್ಟ ಕಾಲೇಜು ಪ್ರಾಂಶುಪಾಲರು ಅರ್ಹ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಮಾಹಿತಿ ನೀಡಬೇಕೆಂದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅವರು ಹೇಳಿದರು.

ಬೆಳಿಗ್ಗೆ ಜಿಲ್ಲಾಧಿಕಾರಿ ಕಚೇರಿಯ ನೂತನ ಸಭಾ ಭವನದಲ್ಲಿ ಜಿಲ್ಲಾ ಮಟ್ಟದ ಯುವನಿಧಿ ಯೋಜನೆಯ ಬಿತ್ತಿಪತ್ರವನ್ನು ಅನಾವರಣಗೊಳಿಸಿ, ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಯೋಜನೆಯಡಿಯಲ್ಲಿ ಪದವೀಧರರರು, ಡಿಪ್ಲೇಮಾ ತೇರ್ಗಡೆಯಾದವರು 2022–23ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಾಂಗ ಮಾಡಿ, 2023 ತೇರ್ಗಡೆಯಾದ ಮತ್ತು ಫಲಿತಾಂಶ ಪ್ರಕಟಗೊಂಡ 180 ದಿವಸದ ಒಳಗಡೆ ಕೆಲಸ ದೊರೆಯದ ನಿರುದ್ಯೋಗಿ ಅರ್ಹ ಅಭ್ಯರ್ಥಿಗಳಿಗೆ ಸೇವಾಸಿಂಧು ಪೇರ್ಟಲ್ ಆನ್ಲೈನ್ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಯುವನಿಧಿ ಯೋಜನೇಯ ನೋಂದಣಿ ಪ್ರಕ್ರಿಯೆಯು ಡಿ.26 ರಿಂದ ಜಿಲ್ಲೆಯಲ್ಲಿ ಆರಂಭವಾಗಿದೆ. ಈ ಯುವನಿಧಿ ಯೋಜನೆಗೆ ನೋಂದಣಿಯಾದ ಪದವೀಧರರಿಗೆ ರೂ. 3.000 ಹಾಗೂ ಡಿಪ್ಲೇಮಾ ತೇರ್ಗಡೆಯಾದವರಿಗೆ ರೂ. 1.500 ಮಾಸಿಕ ನಿರುದ್ಯೋಗ ಭತ್ಯೆಯನ್ನು ಆಧಾರ ಜೋಡಣೆಯ ಅಭ್ಯರ್ಥಿಗಳ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ ಮೂಲಕ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.



ಅಗತ್ಯವಾದ ಎಲ್ಲ ದಾಖಲೆಗಳನ್ನು ಹೊಂದಿರುವ ವಿದ್ಯಾರ್ಥಿಗಳು ಮುಂಚಿತವಾಗಿ ತಾತ್ಕಾಲಿಕ ಪದವಿ ಹಾಗೂ ಡಿಪ್ಲೊಮಾ ಪ್ರಮಾಣ ಪತ್ರ ಪಡೆದು 180 ದಿನಗಳು ಪೂರ್ಣಗೊಳ್ಳುವ ಮುಂಚೆ ಅರ್ಜಿ ಸಲ್ಲಿಸತಕ್ಕದ್ದು, 180 ದಿನಗಳ ನಂತರ ಸೌಲಭ್ಯವನ್ನು ನೀಡಲಾಗುವುದು. ಅಭ್ಯರ್ಥಿಯು ನಿರುದ್ಯೋಗಿ ಎಂದು ದೃಢೀಕರಿಸಬೇಕು ಮತ್ತು ಘೋಷಣೆಯನ್ನು ಸಲ್ಲಿಸಬೇಕು. ಉದ್ಯೋಗ ದೊರಕಿದ ನಂತರ ಅಭ್ಯರ್ಥಿಯು ತಕ್ಷಣವೇ ಮುಚ್ಚಳಿಕೆ ಪತ್ರ ನೀಡತಕ್ಕದ್ದು ಎಂದು ಅವರು ತಿಳಿಸಿದರು.

ನೋಂದಾಯಿತ ಅಭ್ಯರ್ಥಿ ವಿವರಗಳನ್ನು ಎನ್.ಎ. ಡಿ ಮೂಲಕ ಪರಿಶೀಲಿಸಲಾಗುವುದು. ಪದವಿ ಹಾಗೂ ಡಿಪ್ಲೊಮಾದ ಪ್ರಮಾಣ ಪತ್ರಗಳನ್ನು ಮ್ಯಾನುವೆಲ್ ಮೂಲಕ ಅಪ್ಲೇಡ್ ಮಾಡಿದರೆ, ಅಪ್ ಲೋಡ್ ಮಾಡಿದ ದಾಖಲೆಗಳ ವಿವರಗಳನ್ನು ಆಯಾ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಿಗೆ ರವಾನಿಸಲಾಗುವುದು, ತಪ್ಪು ಘೋಷಣೆ ಅಥವಾ ಉದ್ಯೋಗ ಪಡೆದಿರುವುದನ್ನು ಘೋಷಿಸಲು ವಿಫಲವಾದರೆ ದಂಡ ವಿಧಿಸಲಾಗುತ್ತದೆ. ಪಾವತಿಸಿದ ಮೊತ್ತವನ್ನು ಕಾನೂನಿನ ಪ್ರಕಾರ ವಸೂಲಿ ಮಾಡಲಾಗುವುದು. ಯುವನಿಧಿ ಯೋಜನೆಯಡಿ ನೋಂದಾಯಿತ ಅಭ್ಯರ್ಥಿಗಳ ದತ್ತಾಂಶವನ್ನು ಪರಿಶೀಲನೆಗಾಗಿ ಕೌಶಲ್ಯ ಸಂಪರ್ಕ ಪೇರ್ಟಲ್ಗೆ ಲಭ್ಯವಿರುವ ದತ್ತಾಂಶದೊಂದಿಗೆ ವರ್ಗಾಯಿಸಲಾಗುವುದು.

ನಿರುದ್ಯೋಗಿಯಾಗಿರುವುದನ್ನು ನಿಗದಿತ ನಮೂನೆಯಲ್ಲಿ ಪ್ರತಿ ತಿಂಗಳ 25 ನೇ ತಾರೀಖು ಅಥವಾ ಅದಕ್ಕಿಂತ ಮೊದಲು ಆಧಾರ್ ಆಧಾರಿತ ಓ.ಟಿ.ಪಿ ಮೂಲಕ ಘೋಷಣೆ ಮಾಡತಕ್ಕದ್ದು.

2023ರಲ್ಲಿ ಪದವಿ, ಡಿಪ್ಲೇಮಾ ಪಾಸಾದ ಅಭ್ಯರ್ಥಿಗಳು ಸೇವಾಸಿಂಧು ಆನ್ಲೈನ್ನಲ್ಲಿ ನೋಂದಣಿಯಾಗಿ ಸದು ಪಯೋಗವನ್ನು ಪಡೆದುಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ವೇದಿಕೆಯ ಮೇಲೆ ಕೌಶಲ್ಯ ಅಭಿವೃದ್ಧಿ ಅಧಿಕಾರಿ ಡಾ.ಚಂದ್ರಪ್ಪ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಪ್ರಭಾರಿ ಸಹಾಯಕ ನಿರ್ದೇಶಕ ಮಹೇಶ ಅವರು ಉಪಸ್ಥಿತರಿದ್ದರು.

ಸಭೆಯಲ್ಲಿ ಪದವಿ ಹಾಗೂ ಡಿಪ್ಲೊಮಾ ಕಾಲೇಜಿನ ಪ್ರಾಂಶುಪಾಲರು ಮತ್ತು ಜಿಲ್ಲಾ – ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ರೂಪಾಂತರಿ ತಳಿಯ ಸೋಂಕು ಜಾಗೃತಿ ಅಗತ್ಯ: ತಹಶೀಲ್ದಾರ್ ಮಂಜುಳಾ



ಹುಕ್ಕೇರಿ: ತಾಲೂಕಿನಲ್ಲಿ ಕೋವಿಡ್ ರೂಪಾಂತರಿ ತಳಿಯ ಸೋಂಕು ಪಸರಿಸದಂತೆ ಅಗತ್ಯ ಮುನ್ನಚ್ಚರಿಕೆ ಕ್ರಮಗಳನ್ನು ವಹಿಸಬೇಕು ಎಂದು ತಹಶೀಲ್ದಾರ್ ಮಂಜುಳಾ ನಾಯಕ ಹೇಳಿದರು.

ಪಟ್ಟಣದ ಸಾರ್ವಜನಿಕ ಸರಕಾರಿ ಆಸ್ಪತ್ರೆಯಲ್ಲಿ ಸ್ಥಾಪಿಸಲಾದ ಆಕ್ಸಿಜನ್ ಘಟಕ ಪರಿಶೀಲಿಸಿದ ಬಳಿಕ ವೈದ್ಯರೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕೊರೋನಾ ರೂಪಾಂತರಿ ತಳಿಯ ಬಗ್ಗೆ ಆತಂಕ ಪಡದೇ ಮುಂಜಾಗೃತಾ ಕ್ರಮ ವಹಿಸಬೇಕು ಎಂದರು.

ಈ ಸೋಂಕು ತಡೆಗೆ ಆಸ್ಪತ್ರೆಯಲ್ಲಿ ಅಗತ್ಯ ಆಕ್ಸಿಜನ್ ಬೆಡ್, ಐಸಿಯು ಬೆಡ್, ವೆಂಟಿಲೇಟರ್ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಹೊಂದಬೇಕು. ಸಂಶಯಾಸ್ಪದ ರೋಗಿಗಳ ರಕ್ತ ತಪಾಸಣಾ ಮಾಡಬೇಕು. ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ವಿವಿಧ ಇಲಾಖೆಗಳು ಆರೋಗ್ಯ ಇಲಾಖೆಯೊಂದಿಗೆ ಕೈ ಜೋಡಿಸುವ ಮೂಲಕ ಸೋಂಕು ನಿಯಂತ್ರಣದಲ್ಲಿ ಮಹತ್ವದ ಪಾತ್ರ ನಿಭಾಯಿಬೇಕು ಎಂದು ಅವರು ಹೇಳಿದರು.

ತಾಲೂಕು ಆರೋಗ್ಯ ಅಧಿಕಾರಿ ಡಾ.ಉದಯ ಕುಡಚಿ, ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ.ಎಂ.ಎಂ.ನರಸನ್ನವರ, ವೈದಾಧಿಕಾರಿಗಳಾದ ಡಾ.ಎಸ್.ಸಿ.ವಿಜಾಪುರ, ಡಾ.ರಿಯಾಜ್ ಮಕಾನದಾರ, ವಿನಯ ಬಾರ್ಕಿ ಮತ್ತಿತರರು ಉಪಸ್ಥಿತರಿದ್ದರು.

# ತಂದೆಯ ಶವ ಸುಡಲು ಸ್ಮಶಾನ ಇಲ್ಲದೇ ರಸ್ತೆ ಬದಿಯಲ್ಲಿ ಅಂತ್ಯಕ್ರಿಯೆ ಮಾಡಿದ ಮಗ



ತುಮಕೂರು: ಸ್ಮಶಾನಕ್ಕೆ ಜಾಗವಿಲ್ಲದ ಹಿನ್ನೆಲೆ ಕುಟುಂಬಸ್ಥರು ರಸ್ತೆ ಬದಿಯೇ ಮೃತ ವ್ಯಕ್ತಿಯ ಅಂತ್ಯ ಸಂಸ್ಕಾರ ಮಾಡಿದ ಘಟನೆ ತುಮಕೂರು ತಾಲೂಕಿನ ದುರ್ಗದಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸಾರ್ವಜನಿಕ ಸ್ಮಶಾನವಿಲ್ಲದ ಹಿನ್ನೆಲೆ ಕುಟುಂಬಸ್ಥರು ರಸ್ತೆ ಬದಿಯೇ ಅಂತ್ಯಸಂಸ್ಕಾರ ಮಾಡಿದ್ದಾರೆ.

ದುರ್ಗದಹಳ್ಳಿ ಗ್ರಾಮದ ತಿಮ್ಮರಾಜುರವರ ತಂದೆ ಪೆದ್ದಯ್ಯ ಎಂಬುವವರು ಇತ್ತೀಚೆಗೆ ಮೃತಪಟ್ಟಿದ್ದರು.

ವಯೋಸಹಜ ಕಾಯಿಲೆಯಿಂದ ಮೃತ ಪಟ್ಟಿದ್ದರು. ಅವರ ಅಂತ್ಯಸಂಸ್ಕಾರಕ್ಕೆ ಸಾರ್ವಜನಿಕ ಸ್ಮಶಾನವಿಲ್ಲದ ಕಾರಣ. ಮಗ ತಿಮ್ಮರಾಜು ರಸ್ತೆಬದಿಯೇ ತಂದೆಯ ಅಂತ್ಯ ಸಂಸ್ಕಾರ ಮಾಡಿದ್ದಾರೆ. ತಿಮ್ಮನಾಯಕನಹಳ್ಳಿ ಗ್ರಾಮಕ್ಕೆ ತೆರಳುವ ರಸ್ತೆ ಬದಿ ಮೃತರ ಅಂತ್ಯ ಸಂಸ್ಕಾರ ಮಾಡಿದ್ದಾರೆ.

ದುರ್ಗದಹಳ್ಳಿ ಗ್ರಾಮಕ್ಕೆ ಸಾರ್ವಜನಿಕ ಸ್ಮಶಾನ ಮಂಜೂರು ಮಾಡಿಕೊಡುವಂತೆ ಹಲವು ಬಾರಿ ಮನವಿ ಮಾಡಲಾಗಿತ್ತು.

ತಹಸೀಲ್ದಾರ್ ಸೇರಿದಂತೆ ಹಲವು ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು.

ಆದರೆ ಜಮೀನು ಮಂಜೂರು ಮಾಡಲು ಅಧಿಕಾರಿಗಳು ವಿಫಲವಾದ ಹಿನ್ನಲೆ. ರಸ್ತೆ ಬದಿಯೇ ಮೃತರ ಅಂತ್ಯಸಂಸ್ಕಾರ ಕುಟುಂಬಸ್ಥರು ಮಾಡಿದ್ದಾರೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ದೌಡಾಯಿಸಿದ್ದಾರೆ. ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಮಗಳನ್ನು ಹತ್ಯೆಗೈದು ಕಥೆ ಕಟ್ಟಿದ ಕಿರಾತಕ ತಂದೆ ಅರೆಸ್ಟ್



ಕೋಲಾರ: ತಂದೆಯೇ ಮಗಳನ್ನು ಬರ್ಬರವಾಗಿ ಹತ್ಯೆ ಮಾಡಿರೋ ಘಟನೆ ಮುಳಬಾಗಿಲು ತಾಲೂಕಿನ ಮುಸ್ಟೂರು ಗ್ರಾಮದಲ್ಲಿ ನಡೆದಿದೆ. ಅರ್ಚಿತಾ ಮೃತ ಮಗಳು. ತಂದೆ ರವಿ ಕೊಲೆ ಮಾಡಿದ ಆರೋಪಿ.

ಕಳೆದ ಮೇ ತಿಂಗಳ 21ನೇ ತಾರೀಕಿನಂದು ಈ ಭಯಾನಕ ಕೊಲೆ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ. ಆರೋಪಿ ತಂದೆ ರವಿ ಅಪ್ರಾಪ್ತ ಬಾಲಕಿಗೆ ಬೇರೊಂದು ಹುಡುಗನ ಜೊತೆಗೆ ಮದುವೆ ಮಾಡಿಸಿದ್ದ. ಮದುವೆಯಾದ ಮೇಲೆ ಅರ್ಚಿತಾ ಸಂಸಾರ ಮಾಡಲು ನಿರಾಕರಿಸಿದ್ದಾಳೆ. ಇದಕ್ಕೆ ಕೋಪಗೊಂಡ ತಂದೆ ಮಗಳನ್ನು ಕೊಂದು ಸುಟ್ಟು ಹಾಕಿದ್ದಾನೆ. ಬಳಿಕೆ ತಾನೇ 5 ತಿಂಗಳ ಬಳಿಕ ಪೊಲೀಸ್ ಠಾಣೆಗೆ ಹೋಗಿ ಮಗಳು ಕಾಣೆಯಾಗಿದ್ದಾಳೆ ಎಂದು ದೂರು ನೀಡಿದ್ದಾನೆ.

ಕೊಲೆ ಪ್ರಕರಣವನ್ನು ದಾಖಲಿಸಿಕೊಂಡ ನಂಗಲಿ ಪೊಲೀಸ್ ಅಧಿಕಾರಿಗಳು ತನಿಖೆ ಶುರು ಮಾಡಿದ್ದಾಗ ಈ ಕೊಲೆ ಕೇಸ್ ಬೆಳಕಿಗೆ ಬಂದಿದೆ. ಸದ್ಯ ಆರೋಪಿಯನ್ನು ಬಂಧಿಸಿರುವ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ಜಿಲ್ಲೆಯಲ್ಲಿ ಡಿಸೆಂಬರ್ 27 ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

ಧಾರವಾಡ: ಜಿಲ್ಲಾ ಆಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ಮಹಾಂತ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಕಾನೂನು ಮಾಪನ ಶಾಸ್ತ್ರ

ಇಲಾಖೆ, ಹಾಗೂ ಗ್ರಾಹಕ ಮಾಹಿತಿ ಕೇಂದ್ರ ಮತ್ತು ಸ್ಥಳೀಯ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಗ್ರಾಹಕ ದಿನಾಚರಣೆಯನ್ನು ಡಿ 27 ರಂದು ಬೆಳಿಗ್ಗೆ 10 ಗಂಟೆಗೆ ಮಹಾಂತ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪರುಶುರಾಮ ಎಫ್ ದೊಡ್ಡಮನಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಈಶ್ವರಪ್ಪ ಕೆ ಬೋತೆ ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ವಿಶಾಲಾಕ್ಷಿ, ಪ್ರಭು ಸಿ.ಹಿರೇಮಠ, ಮಹಾಂತ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶಾಂತಯ್ಯ ಕೆ.ಎಸ್.ಅವರು ಅತಿಥಿಗಳಾಗಿ ಆಗಮಿಸುವರು.

# ವಿಜಯಪುರ ವಿಮಾನ ನಿಲ್ದಾಣ ಕಾಮಗಾರಿ ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ



ವಿಜಯಪುರ: ವಿಜಯಪುರದ ನಗರದ ಹೊರವಲಯದ ಬುರಾಣಪುರ ಹತ್ತಿರ ನಿರ್ಮಿಸಲಾಗುತ್ತಿರುವ ವಿಜಯಪುರ ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವಿಜಯಪುರ ವಿಮಾನ ನಿಲ್ದಾಣ ರನ್ವೇ ಕಾಮಗಾರಿ ಸಂಪೂರ್ಣ ಪೂರ್ಣಗೊಂಡಿದ್ದು, ಬಾಕಿ ಇರುವ ರನ್ ವೇ ಮಾರ್ಕಿಂಗ್ ಕಾಮಗಾರಿ, ರಾಷ್ಟ್ರೀಯ ಹೆದ್ದಾರಿಯಿಂದ ವಿಮಾನ ನಿಲ್ದಾಣಕ್ಕೆ ಕೂಡುವ ರಸ್ತೆ ನಿರ್ಮಾಣದ ಬಗ್ಗೆಯೂ ಪರಿಶೀಲಿಸಿ, ಶೀಘ್ರವೇ ಕಾಮಗಾರಿ ಪೂರ್ಣಗೊಳಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಂ.ಎಂ. ಪಾಟೀಲ, ಶಾಸಕರಾದ ಯಶವಂತರಾಯಗೌಡಾ ಪಾಟೀಲ್, ಸಿ.ಎಸ್. ನಾಡಗೌಡ, ಅಶೋಕ ಮನಗೂಳಿ, ಮಾಜಿ ಶಾಸಕರಾದ ಮನೋಹರ, ಮಕ್ಬುಲ್ ಬಾಗವಾನ, ಮುಖಂಡರಾದ ಅಬ್ದುಲ್ ಹಮೀದ್ ಶರೀಫ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ರಾಜು ಅಲಗೂರ ಸೇರಿದಂತೆ ಅನೇಕರು ಇದ್ದರು.

# ನ್ಯಾಯಾಲಯ ಕಟ್ಟಡ ನಿರ್ಮಾಣಕ್ಕೆ ಪ್ರಯತ್ನ: ರಮೇಶ ಕತ್ತಿ



ಹುಕ್ಕೇರಿ: ಪಟ್ಟಣದ ಹೊರವಲಯದ ಕ್ಯಾರಗುಡ್ ಬಳಿ ನ್ಯಾಯಾಲಯದ ನೂತನ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ 5 ಎಕರೆ ಜಾಗ ಹಂಚಿಕೆಯಾಗಿದ್ದು ಶೀಘ್ರವೇ ಕಟ್ಟಡಕ್ಕೆ ಬೇಕಾದ ಅಗತ್ಯ ಅನುದಾನ ಮಂಜೂರು ಮಾಡಿಸಲು ಪ್ರಯತ್ನಿಸಲಾಗುವುದು ಎಂದು ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ಹೇಳಿದರು.

ತಾಲೂಕಿನ ಬೆಲ್ಲದ ಬಾಗೇವಾಡಿ ಗೃಹ ಕಚೇರಿಯಲ್ಲಿ ಮಂಗಳವಾರ ವಕೀಲರ ಸಂಘದ ನೂತನ ಪದಾಧಿಕಾರಿಗಳಿಂದ ಸತ್ಕಾರ ಸ್ವೀಕರಿಸಿ ಮಾತನಾಡಿದ ಅವರು, 5 ಎಕರೆ ಪ್ರದೇಶದಲ್ಲಿ ಸುಸಜ್ಜಿತ ನ್ಯಾಯಾಲಯ ಕಟ್ಟಡ, ವಕೀಲರ ಭವನ, ಇ–ಲೈಬ್ರರಿ ಹಾಗೂ ನ್ಯಾಯಾಧೀಶರ ಮತ್ತು ಸಿಬ್ಬಂದಿ ವಸತಿ ಗೃಹ ನಿರ್ಮಿಸಲಾಗುವುದು ಎಂದರು.

ಚುನಾವಣೆಯಲ್ಲಿ ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು. ಹಿರಿಯ ಮತ್ತು ಕಿರಿಯ ವಕೀಲರೆಲ್ಲರೂ ಒಟ್ಟಾಗಿ ಸಂಘದ ಅಭಿವೃದ್ಧಿಗೆ ಶ್ರಮಿಸಬೇಕು.

ಈ ಮೂಲಕ ಮುಂಬರುವ ದಿನಗಳಲ್ಲಿ ಹುಕ್ಕೇರಿ ವಕೀಲರ ಸಂಘದ ಕಾರ್ಯವೈಖರಿ ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಅವರು ಸಲಹೆ ಮಾಡಿದರು.

ನೂತನ ಅಧ್ಯಕ್ಷ ಅನೀಸ್ ವಂಟಮೂರಿ, ನಿಕಟಪೂರ್ವ ಅಧ್ಯಕ್ಷ ರಾಜೀವ ಚೌಗಲಾ ಮಾತನಾಡಿ, ವಕೀಲರ ಸಂಘದ ಶ್ರೇಯೋಭಿವೃದ್ಧಿಗೆ ಕತ್ತಿ ಕುಟುಂಬ ಎಲ್ಲ ರೀತಿಯ ಸಹಾಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಉಪಾಧ್ಯಕ್ಷ ಬಿ.ಎಂ.ಜಿನರಾಳಿ, ಸಹಕಾರ್ಯದರ್ಶಿ ವಿಠ್ಠಲ ಗಸ್ತಿ, ಖಜಾಂಚಿ ಅಂಬರೀಶ ಬಾಗೇವಾಡಿ, ಕೆ.ಎಲ್.ಜಿನರಾಳಿ, ಡಿ.ಕೆ.ಅವರಗೋಳ, ಬಿ.ಕೆ. ಮಗೆನ್ನವರ, ಐ.ಕೆ.ಹೂಲಿಕಟ್ಟಿ, ಐ.ಬಿ.ಅಮ್ಮಣಗಿ, ಎ.ಎಸ್.ಹುಲ್ಲೋಳಿ, ಪ್ರಕಾಶ ಪಾಟೀಲ, ಸುಕುಮಾರ ಮುನ್ನೋಳಿ, ಮುಖಂಡ ಅಪ್ಪಾಸಾಹೇಬ ಸಂಕನ್ನವರ ಮತ್ತಿತರರು ಉಪಸ್ಥಿತರಿದ್ದರು.

# ದಿ.ನಾಗಪ್ಪ ಶೇಖರಗೋಳ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದ ಶಾಸಕ ಬಾಲಚಂದ್ರ ಜಾರಕಿಹೊಳಿ




ಗೋಕಾಕ : ನಮ್ಮ ಕುಟುಂಬವು ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಕ್ಷೇತ್ರಗಳಲ್ಲಿ ಗಣನೀಯ ಪ್ರಗತಿ ಕಾಣಲಿಕ್ಕೆ ಹಲವು ಮಹನೀಯರು ಸೇವೆ ಸಲ್ಲಿಸಿದ್ದಾರೆ. ನಮ್ಮ ಕುಟುಂಬದ ಸಾಮ್ರಾಜ್ಯದಲ್ಲಿ ದಿ. ನಾಗಪ್ಪ ಶೇಖರಗೋಳ ಪಾತ್ರವೂ ಇದೆ. ವಿಧಿಯಾಟದ ಮುಂದೆ ಯಾರೂ ದೊಡ್ಡವರಲ್ಲ. ಅಗಲಿರುವ ನಾಗಪ್ಪನ ಆತ್ಮಕ್ಕೆ ದೇವರು ಚಿರಶಾಂತಿ ನೀಡಲಿ. ಮೃತರ ಕುಟುಂಬಕ್ಕೆ ದುಃಖವನ್ನು ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ಮಂಗಳವಾರದಂದು ತಮ್ಮ ಗೃಹ ಕಛೇರಿಯಲ್ಲಿ ಜರುಗಿದ ದಿ. ನಾಗಪ್ಪ ಶೇಖರಗೋಳ ಅವರಿಗೆ ಶೃದ್ಧಾಂಜಲಿ ಸಲ್ಲಿಸಿ ಮಾತನಾಡಿದ ಅವರು, ನಮ್ಮ ಮತ್ತು ನಾಗಪ್ಪ ಶೇಖರಗೋಳ ಅವರ ಸುಮಾರು 15 ವರ್ಷಗಳ ಒಡನಾಟವನ್ನು ಸ್ಮರಿಸಿಕೊಂಡರು.

ಅವಿಭಜಿತ ಗೋಕಾಕ ತಾಲೂಕಿನ ಜನರ ಪ್ರೀತಿ ಮತ್ತು ಆಶೀರ್ವಾದದಿಂದ ಕಳೆದ 4 ದಶಕಗಳಿಂದ ನಮ್ಮ ಜಾರಕಿಹೊಳಿ ಸಾಮ್ರಾಜ್ಯವನ್ನು ನಿರ್ಮಿಸಿದ್ದೇವೆ. ಇದರಲ್ಲಿ ಬಹಳಷ್ಟು ಜನ ತಮ್ಮ ತ್ಯಾಗವನ್ನು ಅರ್ಪಿಸಿದ್ದಾರೆ. ಅಂತಹದರಲ್ಲಿ ನಾಗಪ್ಪ ಕೂಡ ಒಬ್ಬನು. ನನ್ನ ಅನುಪಸ್ಥಿತಿಯಲ್ಲಿ ಅರಭಾವಿ ಕ್ಷೇತ್ರದ ಸಂಪೂರ್ಣ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದರು. ಜನರ ಕಷ್ಟಗಳಿಗೆ ತಕ್ಷಣವೇ ನನ್ನ ಸೂಚನೆಯ ಮೇರೆಗೆ ಸ್ಪಂದಿಸುವ ಗುಣವಿತ್ತು. ಆದರೆ ವಿಧಿಯಾಟ ನಾಗಪ್ಪನನ್ನು ಇಷ್ಟು ಬೇಗ ಕರೆದೊಯ್ಯಿತು.

ಹುಟ್ಟು ಆಕಸ್ಮಿಕ ಸಾವು ನಿಶ್ಚಿತ ಎಂಬಂತೆ ನಾಗಪ್ಪ ಕೂಡ ಹೃದಯಾಘಾತಕ್ಕೆ ಬಲಿಯಾದ. ಆತನ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಪ್ರಾರ್ಥಿಸಿದರು.

ವಿಧಾನ ಪರಿಷತ್ ಸದಸ್ಯ ಲಖನ್ ಜಾರಕಿಹೊಳಿ, ಯುವ ನಾಯಕರಾದ ರಾಹುಲ ಜಾರಕಿಹೊಳಿ, ಸರ್ವೋತ್ತಮ ಜಾರಕಿಹೊಳಿ, ಖ್ಯಾತ ಲೆಕ್ಕ ಪರಿಶೋಧಕ ಸೈದಪ್ಪ ಗದಾಡಿ, ಉದ್ಯಮಿಗಳಾದ ವಿಕ್ರಮ ಅಂಗಡಿ, ಪ್ರಭು(ಅಪ್ಪು) ಕಲ್ಯಾಣಶೆಟ್ಟಿ, ರಾಜೇಸಾಬ ಅಂಡಗಿ, ಶಿವು ಪಾಟೀಲ, ಸದಾನಂದ ಕಲಾಲ, ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಸುಭಾಸ ಪಾಟೀಲ, ಪರಸಪ್ಪ ಬಬಲಿ ಸೇರಿದಂತೆ ಕ್ಷೇತ್ರದ ಅನೇಕ ಮುಖಂಡರು ಉಪಸ್ಥಿತರಿದ್ದರು.

ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ಆಪ್ತ ಸಹಾಯಕರಾಗಿದ್ದ ದಿ. ನಾಗಪ್ಪ ಶೇಖರಗೋಳ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಪಣೆ ಮಾಡಿದರು.

# ಕೃಷಿ ಇಲಾಖೆ ಕೃಷಿ ಭಾಗ್ಯಯೋಜನೆ: ಅರ್ಜಿ ಅಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ 2023–24 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಮಳೆ ಆಶ್ರಿತ ರೈತರಿಗಾಗಿ ಕೃಷಿ ಇಲಾಖೆಯಿಂದ ಕೃಷಿ ಭಾಗ್ಯ ಯೋಜನೆಯನ್ನು ಮರುಜಾರಿಗೊಳಿಸುತ್ತಿದ್ದು, ಈ ಯೋಜನೆಯನ್ನು ಜಿಲ್ಲೆಯ ಒಣ ಹವಾಮಾನ ವಲಯ ವ್ಯಾಪ್ತಿಯಲ್ಲಿ ಒಳಪಡುವ ಅಥಣಿ, ಕಾಗವಾಡ, ಗೋಕಾಕ, ಮೂಡಲಗಿ, ರಾಯಬಾಗ, ರಾಮದುರ್ಗ, ಸವದತ್ತಿ ಮತ್ತುಯರಗಟ್ಟಿ ತಾಲೂಕುಗಳಲ್ಲಿ ಆಸಕ್ತ ರೈತರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಮಳೆ ಆಶ್ರಿತ ಕೃಷಿಯಲ್ಲಿ ರೈತರ ಆದಾಯ ಸುಸ್ಥಿರತೆಯನ್ನು ತರಲು ಹಲವು ನಿಗದಿತ ಘಟಗಳ ಅಳವಡಿಕೆಗಾಗಿ ರೈತರಿಗೆ ಸಹಾಯಧನ ಒದಗಿಸಲಾಗುತ್ತಿದ್ದೆ.

ಮಳೆ ನೀರು ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆಗಾಗಿ ಕ್ಷೇತ್ರ ಬದು ನಿರ್ಮಾಣ, ಕೃಷಿ ಹೊಂಡ, ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಹೊಂಡದ ಸುತ್ತಲುತಂತಿ ಬೇಲಿ, ಹೊಂಡದಿಂದ ನೀರುಎತ್ತಲು ಪಂಪ್‌ಸೆಟ್, ನೀರನ್ನು ಬೆಳೆಗೆ ಹಾಯಿಸಲು ತುಂತುರು ನೀರಾವರಿ ಘಟಕಗಳ ಪ್ಯಾಕೇಜ್‌ನ್ನು ರೂಪಿಸಿ, ಪ್ಯಾಕೇಜ್ ಅಳವಡಿಸಿಕೊಳ್ಳುವ ರೈತರಿಗೆ ಸಹಾಯಧನ ನೀಡಲು ಯೋಜನೆಯನ್ನು ರೂಪಿಸಲಾಗಿದೆ.

2014–15 ರಿಂದ 2019–20 ನೇ ಸಾಲುಗಳಲ್ಲಿ ಕೃಷಿ ಭಾಗ್ಯಯೋಜನೆ ಅಥವಾ ಇನ್ಯಾವುದೇ ಇಲಾಖೆಯ ಯೋಜನೆಯಡಿ ಕೃಷಿ ಹೊಂಡ ಫಲಾನುಭವಿಯಾಗಿರುವ ರೈತರು ಈ ಯೋಜನೆಗೆ ಅರ್ಹತೆ ಹೊಂದಿರುವುದಿಲ್ಲ.

ಅರ್ಜಿ ಸಲ್ಲಿಸುವ ರೈತರು ಭಾವಚಿತ್ರ, ಆಧಾರ್‌ಪ್ರತಿ, ಪಹಣಿ ಪ್ರತಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ರೈತರಾದರೆ ಜಾತಿ ಪ್ರಮಾಣ ಪತ್ರದ ಜೊತೆಗೆ ಕೃಷಿ ಭಾಗ್ಯಯೋಜನೆ ಅಥವಾ ಇನ್ಯಾವುದೇ ಇಲಾಖೆಯ ಯೋಜನೆಯಡಿ ಕೃಷಿ ಹೊಂಡ ಫಲಾನುಭವಿ ಆಗಿರುವುದಿಲ್ಲವೆಂದು ನಿರಾಕ್ಷೇಪಣಾ ಪತ್ರ (NOC) ವನ್ನು ಪಡೆದು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಗಳಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಿದ ರೈತರಿಗೆ ಜೇಷ್ಠತೆಯ ಆಧಾರದ ಮೇಲೆ ಅರ್ಹರೈತರನ್ನು ಪರಿಗಣಿಸಲಾಗುವುದು.

ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಬೆಳಗಾವಿ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೆರೆಗೆ ಸಿದ್ಧವಾದ 'ಗಾಂಧಿಗ್ರಾಮ'

ಬೆಂಗಳೂರ: ಆರ್ ಪಿಕ್ಚರ್ಸ್ ಲಾಂಛನದಲ್ಲಿ ಯುವ ಪ್ರತಿಭೆ ರಾಮಾರ್ಜುನ್ ನಟ, ನಿರ್ದೇಶಕ, ನಿರ್ಮಾಪಕರಾಗಿ ತಯಾರಿಸಿರುವ ಚಲನಚಿತ್ರ 'ಗಾಂಧಿ ಗ್ರಾಮ' ಕ್ಕೆ ಸೆನ್ಸಾರ್ ಮಂಡಳಿಯಿಂದ ಯು/ಎ ಪ್ರಮಾಣ ಪತ್ರ ದೊರಕಿದ್ದು ತೆರೆಗೆ ಬರಲು ಸಿದ್ಧವಾಗಿದೆ.

ಈ ಚಿತ್ರವು ವಿಭಿನ್ನವಾದ ಕಥಾಹಂದರವನ್ನು ಹೊಂದಿದೆ . ಗ್ರಾಮ ಅಭಿವೃದ್ಧಿ ಮಾಡಲು ಬರುವ ನಾಯಕ ಹಳ್ಳಿಯ ಜನರು ನಾಯಕನಿಗೆ ಸ್ಪಂದಿಸುವ ರೀತಿ ಹಾಗೂ ನಾಯಕನನ್ನು ಹಳ್ಳಿಯ ಜನರು ನೋಡುವ ಪರಿ ಇದರಲ್ಲಿದೆ. ಹಾಸ್ಯದ ಹೊನಲು ನವಿರಾಗಿ ಮೂಡಿದೆ.

ಅದೇ ಹಳ್ಳಿಯಲ್ಲಿ ಪರಿಚಯವಾದ ನಾಯಕಿ ಜೊತೆಗಿನ ಪ್ರೇಮ ಮುಂದೇನಾಗುತ್ತದೆ ಎಂಬುದನ್ನು ಚಿತ್ರಮಂದಿರದಲ್ಲಿ ನೋಡಿ. ಒಟ್ಟಾರೆ



'ಗಾಂಧಿ ಗ್ರಾಮ' ಚಲನಚಿತ್ರ ಕಾಮಿಡಿ, ಲವ್, ಸೆಂಟಿಮೆಂಟ್ ಇರುವ ಚಿತ್ರ, ಗಾಂಧೀಜಿಯವರ ಆದರ್ಶಗಳನ್ನು ಈ ಚಿತ್ರದಲ್ಲಿ ಅಳವಡಿಸಲಾಗಿದೆ, ಇಡೀ ಕುಟುಂಬ ಕುಳಿತು ನೋಡುವ ಒಂದಷ್ಟು ಒಳ್ಳೆಯ ಸಂದೇಶ ಸಾರುವ ಚಲನಚಿತ್ರ ಎಂದು ನಿರ್ದೇಶಕ ರಾಮಾರ್ಜುನ್ ಹೇಳುತ್ತಾರೆ. ಸಧ್ಯ ಚಿತ್ರವನ್ನು ತೆರೆಗೆ ತರುವ ತಯಾರಿಯಲ್ಲಿ ಚಿತ್ರತಂಡ ನಿರತವಾಗಿದೆ.

ಚಿತ್ರದಲ್ಲಿ ರಾಮಾರ್ಜುನ್, ಸುಹಾಸಿನಿ ಗಣೇಶ್, ಮಹಾದೇವ ಮೂರ್ತಿ, ಕೇಶವ್ ಶೀಳನೆರೆ (ಕಾಮಿಡಿ ಗ್ಯಾಂಗ್), ವೃಷಬೇಂದ್ರ, ಬಸವರಾಜು ಉಮ್ಮತ್ತೂರು, ಜೋಕರ್ ಹನುಮಂತ, ಮಂಜುಳಮ್ಮ, ರಾಜಲಕ್ಷ್ಮಿ, ನಾಗರತ್ನ ಮೊದಲಾದವರು ಅಭಿನಯಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ರವಿ ಜೂಮ್, ಸಂತೋಷ್ ಕುಮಾರ್ ಬಿ, ರಘು ಎ ರೂಗಿ , ಸಂಗೀತ: ವಿಶಾಲ್ ಆಲಾಪ್, ಸಂಜಯ್ ಆರ್ ಎಸ್ , ಸಂಕಲನ ಎಸ್. ಶಿವಕುಮಾರ ಸ್ವಾಮಿ, ರಾಮಾರ್ಜುನ್, ಪತ್ರಿಕಾಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರದಿದ್ದು, ಕಥೆ, ಚಿತ್ರಕಥೆ, ಸಂಭಾಷಣೆ, ನಿರ್ದೇಶನ ರಾಮಾರ್ಜುನ್ ಅವರದಿದೆ.

# ಮಹಾಪೂಜೆಯಲ್ಲಿ ಪಾಲ್ಗೊಂಡ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ತಾರಿಹಾಳ ಗ್ರಾಮದಲ್ಲಿ ಶ್ರೀ ಅಯ್ಯಪ್ಪ ಸ್ವಾಮಿ ಮಾಲಾದಾರಿಗಳು ಸೋಮವಾರ ಸಂಜೆ ಹಮ್ಮಿ ಕೊಂಡಿದ್ದ ಮಹಾಪೂಜೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪಾಲ್ಗೊಂಡರು.

ಮಕರ ಸಂಕ್ರಾಂತಿ ದಿನದಂದು ಮಕರ ಜ್ಯೋತಿಯ ದರ್ಶನ ಪಡೆಯಲು ಶಬರಿಮಲೆಗೆ ತೆರಳಲಿರುವ ಎಲ್ಲ ಅಯ್ಯಪ್ಪ ಮಾಲಾದಾರಿಗಳಿಗೆ ಸಚಿವರು ಶುಭ ಹಾರೈಸಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಪಾಂಡು ಖನಗಾಂವ್ಕರ, ನಾಗಯ್ಯ ಪೂಜಾರಿ, ಸೂರ್ಯಾಜಿ ಜಾಧವ್, ಯಲ್ಲಪ್ಪ ಚಿಕಲಿಕೆ, ಯಲ್ಲಪ್ಪ ಜಿ, ಯಲ್ಲಪ್ಪ ಖನಗಾಂವ್ಕರ್, ಬಾಗೇವಾಡಿ ಸಿ ಪಿ ಐ ನೀಲಗಾರ್, ನಾಮದೇವ್ ಜೋಗನ್ನವರ, ರಮೇಶ್ ಜಳಕನ್ನವರ್, ಈರಪ್ಪ ಭೋಮನ್ನವರ, ಪ್ರಮೋದ್ ಜಾಧವ್, ಅಡಿವೆಪ್ಪ ರಾಗಿಪಾಟೀಲ, ಅನಿಲ ಪೂಜಾರಿ ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತರ ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ರಕ್ಷಣಾ/ಎಕರೂಪದ ಸೇವೆಗಳ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ 2023–24ನೇ ಸಾಲಿನ ಅಲ್ಪಸಂಖ್ಯಾತರ ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ರಕ್ಷಣಾ/ಎಕರೂಪದ ಸೇವೆಗಳಿಗೆ (ಭಾರತೀಯ ಸೇನೆ, ವಾಯುಪಡೆ, ನೌಕಾಪಡೆ, CISF, BSF, RPF, ಪೊಲೀಸ್, ಅಬಕಾರಿ ಇತ್ಯಾದಿ) ಸೇರಲು ಇಚ್ಛಿಸುವ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅರ್ಹ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್,ಪಾರ್ಸಿ) ವಿದ್ಯಾರ್ಥಿಗಳು ಕೊನೆಯ ದಿನಾಂಕ: ಜನವರಿ,5,2024 ರೊಳಗಾಗಿ www.dom.karanataka.gov.in ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಬೆಳಗಾವಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರಳಿಮಟ್ಟಿ ಶಾಲೆಯ ಸಂಗಮೇಶ ಬಡಿಗೇರ ರಾಷ್ಟ್ರ ಮಟ್ಟಕ್ಕೆ ಆಯ್ಕೆ



ಬೆಳಗಾವಿ: ಪ್ರೌಢಶಾಲಾ ಮಕ್ಕಳ ಪ್ರತಿಭೆಯನ್ನು ಅನಾವರಣಗೊಳಿಸುವ ಉದ್ದೇಶದಿಂದ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಆನ್ಸೆನ್ ಕಲಾ ಉತ್ಸವ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ನಡೆದ 8 ಸ್ಪರ್ಧೆಗಳಲಿ ಅರಳಿಮಟ್ಟಿ ಪ್ರೌಢಶಾಲೆಯಿಂದ 13 ವಿದ್ಯಾರ್ಥಿಗಳು ಭಾಗವಹಿಸಿದ್ದು, ಮೂರು ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ ಅದರಲ್ಲಿ ಓರ್ವ ವಿದ್ಯಾರ್ಥಿ ಸ್ಥಳೀಯ ಆಟಿಕೆಗಳು ಮತ್ತು ಆಟಗಳು ಸ್ಪರ್ಧೆಯಲ್ಲಿ ಸಂಗಮೇಶ ಬಡಿಗೇರ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಅದೇ ಸ್ಪರ್ಧೆಯಲ್ಲಿ ಸಾವಿತ್ರಿ ಕಾಗವಾಡ ರಾಜ್ಯ ಮಟ್ಟದಲ್ಲಿ 3 ಸ್ಥಾನ ಪಡೆದಿರುತ್ತಾಳೆ. ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲಿ ದೃಶ್ಯ ಕಲೆ 3ಡಿ ಸ್ಪರ್ಧೆಯಲ್ಲಿ ಲಕ್ಷ್ಮಿ ಕಾಗವಾಡ ಪ್ರಥಮ ಸ್ಥಾನ, ದೃಶ್ಯ ಕಲೆ 2ಡಿ ಸ್ಪರ್ಧೆಯಲ್ಲಿ ಆರತಿ ಡಂಬಳ ದ್ವಿತೀಯ ಸ್ಥಾನ ಪಡೆದಿರುತ್ತಾರೆ. ಐಶ್ವರ್ಯಾ ಚನಾಳ ನಾಟಕ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಹಾಗೂ ಸುಶ್ಮಿತಾ ಸಸಾಲಟ್ಟಿ ಸಂಗೀತ ವಾದ್ಯ ಸ್ಪರ್ಧೆಯಲ್ಲಿ ತೃತೀಯ ಮತ್ತು ಚಿದಾನಂದ ಕೋರೆ ನಾಟಕ ಸ್ಪರ್ಧೆಯಲ್ಲಿ ತೃತೀಯ ಸ್ಥಾನ ಪಡೆದಿರುತ್ತಾರೆ.

ಅದೇ ರೀತಿಯಲ್ಲಿ ವಿದ್ಯಾರ್ಥಿಗಳಿಗೆ ಚಿತ್ರಕಲಾ ಶಿಕ್ಷಕರಾದ ಶೋಭಾ ಧಡೂತಿಯವರು ತರಬೇತಿ ನೀಡಿದ್ದರು. ಈ ಶಿಕ್ಷಕಿಯರು ಅವರ ಸೇವಾ ಅವಧಿಯಲ್ಲಿ ಸತತ ಏಳು ವರ್ಷಗಳಿಂದ ರಾಜ್ಯ ಮಟ್ಟಕ್ಕೆ ಹಾಗೂ ಎರಡು ವರ್ಷಗಳಿಂದ ರಾಷ್ಟ್ರಮಟ್ಟಕ್ಕೆ ಆಯ್ಕೆ ಆಗುವಲ್ಲಿ ವಿದ್ಯಾರ್ಥಿಗಳಿಗೆ ತರಬೇತಿ ನೀಡುತ್ತಾ ಬಂದಿದ್ದಾರೆ.

ಈ ವರ್ಷವೂ ಮೂಡಲಗಿ ತಾಲೂಕಿನ ಅರಳಿಮಟ್ಟಿ ಪ್ರೌಢಶಾಲೆಯ ವಿದ್ಯಾರ್ಥಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿ ದೆಹಲಿಯಲ್ಲಿ ನಡೆಯುವ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲು ತಯಾರಿ ನಡೆಸುತ್ತಿದ್ದು ಸದರಿ ಮಕ್ಕಳಿಗೆ ನಿರಂತರ ತರಬೇತಿ ನೀಡುತ್ತಾ ಪ್ರೋತ್ಸಾಹಿಸುತ್ತಿರುವ ಶಾಲೆಯ ಚಿತ್ರಕಲಾ ಶಿಕ್ಷಕರನ್ನು ಹಾಗೂ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಶಾಲೆಯ ಮುಖ್ಯ ಶಿಕ್ಷಕರಾದ ಜಗದೀಶ ತಿಪ್ಪಿಮನಿ ಹಾಗೂ ಎಲ್ಲ ಶಿಕ್ಷಕ ವೃಂದ ಮತ್ತು ಎಸ್.ಡಿ.ಎಮ್.ಸಿ ಅಧ್ಯಕ್ಷರು ಹಾಗೂ ಸದಸ್ಯರು ಅಭಿನಂದನೆ ಸಲ್ಲಿಸಿದರು.

# ಹಿರೇಮುನವಳ್ಳಿ ಗ್ರಾಮದ ಶ್ರೀ ಸಿದ್ಧಶಿವಯೋಗಿ ಶಾಂಡಿಲೇಶ್ವರ ಮಹಾಸ್ವಾಮಿಗಳ ಮಠದ ಜಾತ್ರಾ ಮಹೋತ್ಸವ

ಬೆಳಗಾವಿ: (ಖಾನಾಪುರ ತಾಲೂಕಿನ ಹಿರೇಮುನವಳ್ಳಿ ಗ್ರಾಮದ ಸುಕ್ಷೇತ್ರ ಶ್ರೀ ಸಿದ್ಧ ಶಿವಯೋಗಿಶಾಂಡಿಲೇಶ್ವರ ಮಠದ 26ನೆಂ ಯಜಾತ್ರಾಮಹೋತ್ಸವಹಾಗೂಶ್ರೀಮಠದಪಿ ೀಠಾಧ್ಯಕ್ಷರಾದ ಪರಮಪೂಜ್ಯ ಶಂಭುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳ 11ನೆಯ ವರ್ಷದ ಗುರು ಪಟ್ಟಾಧಿಕಾರದ ವರ್ಧಂತಿ ಮಹೋತ್ಸವ ಇದೇ ಸೋಮವಾರ ಡಿಸೆಂಬರ್ 25 ರಿಂದ ಪ್ರಾರಂಭ ವಾಗಿದ್ದು ಇದೇ 29 ರ ವರಗೆ ಜರುಗಲಿದೆ ಈ ಜಾತ್ರಾ ಮಹೋತ್ಸವದಲ್ಲಿ ಶ್ರೀ ಮಠ ದ,ಭಕ್ತರಶ್ರದ್ಧೆ,ಭಕ್ತಿ,ನಿಷ್ಠೆಯಿಂದ ಹಲವು ಧಾರ್ಮಿಕ ಕಾರ್ಯಗಳು,ಜರುಗುತ್ತಲಿವೆ ಅವುಗಳ ಪರಿಚಯಿಸುವ ಕಿರು ಲೇಖನ ಇದು)

ನಮ್ಮಭಾರತ ದೇಶವು ಜಗತ್ತಿನಲ್ಲಿಯೇ ಮಹಾನ ಧಾರ್ಮಿಕ ಪರಂಪರೆಯಲ್ಲಿ ಹೆಸರುವಾಸಿಯಾಗಿದೆ, ಇಲ್ಲಿಯ ಧರ್ಮ, ಆಧ್ಯಾತ್ಮಿಕ, ತತ್ವಜ್ಞಾನ ಜಗತ್ತಿನ ಗಮನ ಸೆಳೆದಿದೆ.

ಭಾರತ ದೇಶವು ಪರಮ ಪುಣ್ಯ ಭೂಮಿ, ಧರ್ಮದ ಕಾರ್ಯದಲ್ಲಿ ಜಗತ್ತಿಗೆ ಮಾದರಿಯಾದ ಪುರಾತನವಾದ ಮಹಾನ ದೇಶ, ಈ ದೇಶದಲ್ಲಿ ಮಹಾನ ಸಂತ ಮಹಾಂತರು, ತಪೋನಿರತ ಸಾಧು ಸಂತರು, ಋಷಿ ಮುನಿಗಳು ತಪಸ್ವಿಗಳು, ಶಿವಶರಣರು, ಮಹಾನ ಪುರುಷರು,ಜನ್ಮತಾಳಿ ಈ ಭೂಮಿಯನ್ನು ಪುಣ್ಯಮಯ ಮಾಡಿರುವರು, ಜೊತೆಗೆ ತಮ್ಮ ತಪೋಶಕ್ತಿಯಿಂದ ಭಕ್ತರನ್ನು ಉದ್ದರಿಸಿರುವರು.

ದೇಶದಲ್ಲಿ ಹಲವಾರುಮತಗಳು,ಪಂಥಗಳು,ಧರ್ಮಗಳು ಜನ್ಮ ತಾಳಿದವು, ಅವುಗಳ ಉದ್ದೇಶ ಮಾನವರ ಬದುಕಿಗೆ ಉತ್ತಮ ಮಾರ್ಗದರ್ಶನ ಮಾಡಿ, ಅವರ ಜೀವನದ ಏಳ್ಗೆಯೆ ಗುರಿಯಾಗಿಸಿಕೊಂಡುಆಧ್ಯಾತ್ಮಿಕವಾಗಿ ಭಕ್ತಿಯಿಂದ ಮುಕ್ತಿ ಪಡೆಯುವ, ಮನುಷ್ಯನ ಜೀವನ ಸಾರ್ಥಕವಾಗಿಸುವಲ್ಲಿ. ನಿರಂತರ ಶ್ರಮವಹಿಸಿವೆ,

ಕಾಲ ಕಾಲಕ್ಕೆ ಮಹಾನ ಪುರುಷರು ವಿವಿಧ ಅವತಾರ ಗಳಲ್ಲಿ ಜನ್ಮ ತಾಳಿ ತಮ್ಮ ವಿಚಾರಧಾರೆ,ನೀತಿ ನಿಯಮ ಮಾರ್ಗದರ್ಶನ, ಉತ್ತಮ ವಿಚಾರಧಾರೆಗಳ ಬೋಧನೆಯನ್ನ ಮಾಡಿ ಈ ಭೂಮಿಯನ್ನು ಪುಣ್ಯ ಮಯ ಮಾಡಿರುವರು,ಈ ಮಹಾನ ಪರಂಪರೆಯ ಪುಣ್ಯ ಪುರುಷರು ಭಕ್ತರ ಉದ್ಧಾರ ಮಾಡಿ ಇತಿಹಾಸದಲ್ಲಿ ಸ್ಮರಣೀಯ ರಾಗಿರುವರು, ಇಂತಹವರಲ್ಲಿ ಮಹಾನ ತಪೋನಿಷ್ಠರಲ್ಲಿ ಪುಣ್ಯ ಮಯ ಖಾನಾಪುರ ತಾಲೂಕಿನ ಹಿರೇಮುನವಳ್ಳಿ ಗ್ರಾಮದಲ್ಲಿ ನೆಲೆಸಿ ತಮ್ಮ ತಪೋಶಕ್ತಿಯಿಂದ ಭಕ್ತರನ್ನು ಉದ್ಧಾರ ಮಾಡಿರುವ ಶ್ರೀ ಶಾಂಡಿಲೇಶ್ವರ ಮಹಾಸ್ವಾಮಿಗಳು ಪ್ರಮುಖರು,ಹಿರೇಮುನವಳ್ಳಿ ಗ್ರಾಮವು ಮಲೆನಾಡ ಸೊಬಗಿನ ಪವಿತ್ರ ಮಲಪ್ರಭಾ ನದಿಯ ತಟದಲ್ಲಿದೆ, ಹಿರಿಯ ಮುನಿಗಳ ವಾಸ ಸ್ಥಾನವೇ ಹಿರೇ ಮುನವಳ್ಳಿ ಗ್ರಾಮವಾಗಿದೆ, ಪೂಜ್ಯರ ವಾಸ ಸ್ಥಾನದಿಂದ ಪುಣ್ಯ ಮಯವಾಗಿದೆ

ದಯಾಮಯ ಭಗವಂತನು ಈ ಕಲಿಯುಗದಲ್ಲಿ ಧರ್ಮ ರಕ್ಷಣೆಗಾಗಿ ಹಲವಾರು ರೂಪದಲ್ಲಿ ಜನ್ಮ ತಾಳಿ ಭಕ್ತರನ್ನು ರಕ್ಷಣೆಮಾಡಿರುವನು, ದುಷ್ಟರ ನಾಶ ಮಾಡಿ ಧರ್ಮ ಸಂರಕ್ಷಣೆ ಮಾಡಿರುವನು, ಇಂಥ ಭಗವಂತನು ನೇಪಾಳ ರಾಜ್ಯದ ಅರಮನೆಯಲ್ಲಿ ಶ್ರೀ ಶ್ಯಾಂಡಿಲೇಶ್ವರ ಮಹಾಸ್ವಾಮಿಗಳ ರೂಪದಲ್ಲಿ ಜನ್ಮ ತಾಳಿದರು, ಅವರು ನೇಪಾಳ ದಲ್ಲಿ ಜನಿಸಿದರು, ನೇಪಾಳ ದೇಶವು ಹಿಮಾಲಯದ ಪುಟ್ಟ ಹಿಂದೂ ರಾಷ್ಟ್ರ, ವಿಶ್ವದ ಅತ್ಯಂತ ಎತ್ತರದ ಹದಿನಾಲ್ಕು ಶಿಖರಗಳಲ್ಲಿ ಎಂಟು ಶಿಖರ ಗಳು ನೇಪಾಳದಲ್ಲಿವೆ.

ಇವಲ್ಲದೇ ಹಿಮದಿಂದ ಕೂಡಿರುವ ಸಾವಿರಾರು ಪರ್ವತ ಗಳು ಮತ್ತು ಕಣಿವೆಗಳು ಜಗತ್ತಿನ ಎಲ್ಲೆಡೆಯಿಂದ ಪ್ರವಾಸಿಗರನ್ನು ಆಕರ್ಷಣೆ ಮಾಡುತ್ತಿವೆ, ನೇಪಾಳದ ಬಹುತೇಕ ನಗರಗಳು ಕಣಿವೆ ಪ್ರದೇಶಗಳಲ್ಲಿವೆ ಇಂಥ ರಮಣೀಯ ದೇಶ ನೇಪಾಳ, ಇಂಥ ದೇಶದಲ್ಲಿ ಅದು ಅರಮನೆಯಲ್ಲಿ ಜನಿಸಿಸುಖ ಭೋಗ ಗಳನ್ನು ಬದಿಗೊತ್ತಿ ಪ್ರಾಪ0ಚಿಕ



ಮೋಹ ಮಮ್ಮಕಾರ ಬಿಟ್ಟು ವೈರಾಗ್ಯ ತಾಳಿ ದೇಶ ಸಂಚಾರ ಮಾಡುತ್ತ ಭಾರತ ದೇಶದಲ್ಲಿ ಹಲವು ಪುಣ್ಯಮಯ ಧಾರ್ಮಿಕ ಕ್ಷೇತ್ರಗಳಲ್ಲಿ ತಪಸ್ಸು ಆಚರಿಸಿ, ಭಾರತ ದೇಶದಲ್ಲಿ ಸಂಚಾರ ಮಾಡುತ್ತ ಭಕ್ತರನ್ನು ಉದ್ಧಾರ ಮಾಡಿ ಕೊನೆಗೆ ಕರ್ನಾಟಕ ರಾಜ್ಯದ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಸುಕ್ಷೇತ್ರಹಿರೇಮುನವಳ್ಳಿಗ್ರಾಮ ದಲ್ಲಿ ನೆಲೆ ನಿಂತು ಭಕ್ತರ ಭಾವನೆ ಗಳಿಗೆ ಸ್ಪಂದಿಸಿ ಅವರ ಜೀವನವನ್ನು ಉದ್ಧಾರ ಮಾಡಿದ ಮಹಾತ್ಮರು, ಅನೇಕ ಲೀಲಾ ವಿನೋದ ಗಳಿಂದ, ಪವಾಡ ಗಳಿಂದ,ಭಕ್ತರ ಗಮನ ಸೆಳೆದವರು, ಸರ್ವರಿಗೂ ಒಳಿತನ್ನೆ ಬಯಸಿದರು, ತಮ್ಮ ತಪೋಶಕ್ತಿ, ಕರುಣೆ, ಪ್ರೀತಿ ವಿಶ್ವಾಸ ಗಳಿಂದ ಭಕ್ತರನ್ನು ಉದ್ಧಾರ ಮಾಡಿದರು, ದುಷ್ಟರ ದಮನ ಮಾಡಿದರು, ಉತ್ತಮ ಸಮಾಜ ನಿರ್ಮಾಣಕ್ಕೆ ದಾರಿದೀಪವಾದವರು, ಇಂದಿಗೂ ಈ ಭಾಗದಲ್ಲಿ ಪೂಜ್ಯರಾದವರು, ಇಂಥ ಪರಮ ಪೂಜ್ಯರ ನೆನಪಿನಲ್ಲಿ ಪ್ರತಿವರ್ಷ ಅಜ್ಜನ ಜಾತ್ರೆ ನಡೆಯುತ್ತಿದೆ, ನಾಡಿನ ಪರಮ ಪೂಜ್ಯರು, ಸಾಮಾಜಿಕ, ರಾಜಕೀಯ ನಾಯಕರು, ರಾಜ್ಯದ ವಿವಿಧ ಭಾಗಗಳಿಂದ ಭಕ್ತರು ಜಾತ್ರಾ ಕಾರ್ಯಕ್ರಮಕ್ಕೆ ಆಗಮಿಸಿ ಸದ್ಗುರು ನಾಥನ ದರ್ಶನ ಪಡೆದುಕೊಂಡು ಸೇವೆ ಸಲ್ಲಿಸಿ ಪುನೀತರಾಗುವರು, ಇದೊಂದು ಪುಣ್ಯಮಯಕಾರ್ಯಕ್ರಮವಾಗುತ್ತದೆ.

ಧಾರ್ಮಿಕ, ಸಾಮಾಜಿಕ ವಿಷಯಗಳ ಕಾರ್ಯಕ್ರಮ, ಪೂಜೆ ಪುನಸ್ಕಾರಗಳು,ನಾಡಿನ ಶಾಂತಿಗಾಗಿ, ಸಮೃದ್ಧಿಗಾಗಿ, ಭಕ್ತರ ಬಯಕೆ ಈಡೇರಿಕೆಗಾಗಿ ಹೋಮ ಹವನಗಳು ಜರಗುತ್ತವೆ,

ಬೆಳಗಾವಿ ತಾಲೂಕಿನ ಸುಕ್ಷೇತ್ರ ಮುಕ್ತಿ ಮಠದ ತಪೋರತ್ನ ಪರಮ ಪೂಜ್ಯ ಶ್ರೀ ಶಿವಸಿದ್ಧ ಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸೇರಿದಂತೆ ನಾಡಿನವಿವಿಧ ಪೂಜ್ಯ ಮಠಾಧೀಶ್ವರರು ಉಪಸ್ಥಿತಿಯಲ್ಲಿ ಮಠದ ಪೀಠಾಧ್ಯಕ್ಷರಾದ ಶ್ರೀ ಶಂಭುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳಮುಂದಾಳತ್ವದಲ್ಲಿ ಜಾತ್ರಾಮಹೋತ್ಸವವುವೈಭವದಿಂದ ಜರಗುತ್ತಿದೆ,

ಸದ್ಯದ ಶ್ರೀ ಶಾಂಡಿಲೇಶ್ವರ ಮಠದ ಹಿರೇಮುನವಳ್ಳಿ ಹಾಗೂ ಪಾರಿಶ್ವಾಡದ ಶಾಖಾ ಮಠದ ಪೀಠಾಧೀಪತಿ ಗಳಾದ ಶ್ರೀ ಶಂಭುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಭಕ್ತರ ಹಿತ ಬಯಸುವ ಅಪರೂಪದ ಸರಳ ಸಜ್ಜನಿಕೆಯ ಮಹಾಸ್ವಾಮಿಗಳು, ಯಾವಾಗಲು ಎಲ್ಲರನ್ನೂ ನಗು ಮುಖದಿಂದಸ್ವಾಗತಿಸಿ, ಹಿತಮಿತದ ಮಾತಗಾರಿಕೆಯಿಂದ ಭಕ್ತರ ಪಾಲಿಗೆ ದೇವರಾಗಿದ್ದಾರೆ,ಅವರು ಹನ್ನೊಂದು ವರ್ಷದ ಗುರು ಪಟ್ಟಾಧಿಕಾರದವರ್ಧಂತಿಮಹೋತ್ಸವಆಚರಣೆ ನಡೆಯುತ್ತಿದೆ, ಈ ಭಾಗದ ಧಾರ್ಮಿಕ ಜಾಗೃತಿಗೆ ಶ್ರಮ ವಹಿಸುತ್ತಿದ್ದಾರೆ,ಮಠದ ಅಭಿವೃದ್ಧಿ ಹಾಗೂ ಬದಲಾವಣೆಗೆ ಭಕ್ತರ ನೆರವಿನಿಂದ ಯಶಸ್ಸು ಗಳಿಸಿರುವರು, ಮಠವನ್ನು ಶ್ರದ್ಧಾ ಕೇಂದ್ರವನ್ನಾಗಿ ಮಾಡಿ ಭಕ್ತರ ಪಾಲಿಗೆ ಮಾರ್ಗದರ್ಶನ ಮಾಡುತ್ತಿದ್ದಾರೆ, ಮಠಕ್ಕೆ ಆಗಮಿಸಿದ ಭಕ್ತರ ಭಾವನೆಗಳಿಗೆ, ಅವರ ನೋವು ನಲಿವುಗಳಿಗೆ ಸ್ಪಂದಿಸುತ್ತಿರುವರು, ಅವರ ಧಾರ್ಮಿಕ ಸೇವೆ ನಾಡಿಗೆ ವಿಸ್ತಾರ ವಾಗಲಿ, ಮಠವು ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಲೆಂದು ಆಶಿಸಿ ಭಕ್ತಿಪೂರ್ವಕ ಅಭಿನಂದನೆಗಳನ್ನು ಸಲ್ಲಿಸೋಣ,

ಈ ಐದು ದಿನದ ಜಾತ್ರಾ ಮಹೋತ್ಸವದಲ್ಲಿ ಪ್ರತಿದಿನದ ಪ್ರಾತ:ಕಾಲ 6 ಘಂಟೆಗೆ ಶ್ರೀ ಸಿದ್ಧ ಶಿವಯೋಗಿ ಶಾಂಡಿಲೇಶ್ವರ ಗದ್ದುಗೆಗೆ ಮಹಾ ರುದ್ರಾಭಿಷೇಕ ಜೊತೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಪ್ರತಿದಿನ ಸಾಯಂಕಾಲ 6 ಘಂಟೆಗೆ ವಿವಿಧ ವಿಷಯ ಗಳ ಧಾರ್ಮಿಕ ಕಾರ್ಯಕ್ರಮಗಳು, ನಾಡಿನ ವಿವಿಧ ಪ್ರಮುಖ ಮಠಾಧೀಶ್ವರರ ಸಮ್ಮುಖದಲ್ಲಿ ಧರ್ಮ ಸಭೆಗಳಲ್ಲಿ ಧರ್ಮದ ಚಿಂತನೆ ನಡೆಯಲಿದೆ, ಜೊತೆಗೆ ಮಹಾಪ್ರಸಾದ ನಡೆಯುತ್ತದೆ,

ಐದು ದಿನಗಳ ಕಾಲ ವೇ, ಮೂ, ತುರಮರಿಯ ಶಾಂತಯ್ಯ ಮಹಾಸ್ವಾಮಿಗಳು ಹಾಗೂ ಹಿರೇಮುನವಳ್ಳಿಯ ಕುಮಾರಿ ಶಾ0ಭವಿದೇವಿ ಇವರಿಂದ ಪ್ರವಚನ ನಡೆಯುತ್ತಿದೆ, ಜೊತೆಗೆ ಭಜನಾ ಕಾರ್ಯಕ್ರಮ ನಡೆಯುತ್ತಿದೆ,

ಈ ಜಾತ್ರಾ ಅವಧಿಯಲ್ಲಿ ಗುರುವಿನ ನಾಣ್ಯ ತುಲಾಭಾರಗಳು , ಗಣಹೋಮಗಳು , ಅಜ್ಜನ ಪಲ್ಲಕ್ಕಿಯ ಉತ್ಸವ, ಮಹಾಮೃತುಂಜಯ ಹೋಮ ಗಳು ಜರಗುತ್ತಿವೆ,ನಾಡಿನ ವಿವಿಧ ಭಾಗಗಳಿಂದ ಭಕ್ತರು ಅಪಾರ ಸಂಖ್ಯೆಯಲ್ಲಿ ಆಗಮಿಸಿ ಭಕ್ತಿಯ ಸೇವೆ ಸಲ್ಲಿಸಿ ಸದ್ಗುರು ನಾಥನ ಕೃಪೆಗೆ ಪಾತ್ರರಾಗುತ್ತಿರುವರು, ನೀವು ಬನ್ನಿರಿ, ಸದ್ಗುರುನಾಥನ ದರ್ಶನ ಪಡೆದುಕೊಂಡು ಪುನೀತರಾಗಿರಿ ಬಸವರಾಜ ಫಕೀರಪ್ಪ ಸುಣಗಾರ ಮುಖ್ಯೋಪಾಧ್ಯಾಯರು, ಬೆಳಗಾವಿ, ಮೊ ನ0,9481738018

## "ಮಕ್ಕಳ ರಕ್ಷಣಾ ಸಮಿತಿ": ಸಾಮಾರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಾಗಾರ

# ರಕ್ಷಣೆ ಮಾಡುವುದು ನಮ್ಮ ನಿಮ್ಮೆಲ್ಲರ ಕರ್ತವ್ಯ: ಪಿ. ಮುರಳಿ ಮೋಹನ ರೆಡ್ಡಿ

ಬೆಳಗಾವಿ: ಸಂವಿದಾನದ ಅನುಚ್ಛೇದ 21 (ಎ) ಪ್ರಕಾರ 6 ರಿಂದ 14 ವರ್ಷದ ಒಳಗಿನ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ನೀಡಬೇಕು. ಅದರಂತೆ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲ ಮಕ್ಕಳಿಗೂ ಶಿಕ್ಷಣ ಕೊಡಿಸುವುದು ತಮ್ಮ ಆದ್ಯ ಕರ್ತವ್ಯವಾಗಿದೆ. ಆದ್ದರಿಂದ ಮಕ್ಕಳ ಹಕ್ಕುಗಳು ಹಾಗೂ ಯಾವುದೇ ಕಾಯ್ದೆ ಕಾನೂನುಗಳು ಉಲ್ಲಂಘನೆ ಆಗದಂತೆ ನೋಡಿಕೊಳ್ಳಬೇಕು. ನಾವು ಮಕ್ಕಳಿಗೆ ನ್ಯಾಯಯುತವಾದ ಮಾರ್ಗವನ್ನು ತೋರಿಸಿ ಅವರನ್ನು ರಕ್ಷಣೆ ಮಾಡುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪಿ. ಮುರಳಿ ಮೋಹನ ರೆಡ್ಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ ಬೆಳಗಾವಿ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೆಳಗಾವಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೆಳಗಾವಿ, ಶಿಕ್ಷಣ ಇಲಾಖೆ, ಮೀರಾಕಲ್ ಪೌಂಡೇಶನ್ ಆಪ್ಇಂಡಿಯಾ ಹಾಗೂ ಅನಮೋಲ ತಂಗುಧಾಮ ಇವರ ಸಹಯೋಗದೋಂದಿಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ರವಿವಾರ (ಡಿ.25) ನಡೆದ ಬೆಳಗಾವಿ ಗ್ರಾಮೀಣ ವಯಲಯದ ಮುಖ್ಯೋಪಾಧ್ಯಾಯರಿಗೆ ಪ್ರಾಥಮಿಕ ಶಾಲೆಗಳಲ್ಲಿ ರಚಿಸಿರಬೇಕಾದ "ಮಕ್ಕಳ ರಕ್ಷಣಾ ಸಮಿತಿ" ಬಗ್ಗೆ ಸಾಮಾರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಇತ್ತಿಚಿನ ದಿನಮಾವನಗಳಲ್ಲಿ ಗ್ರಾಮ ಮಟ್ಟದಲ್ಲಿ ಬಾಲ್ಯವಿವಾಹ ಸಂಖ್ಯೆ ಹೆಚ್ಚಾಗುತ್ತಿದ್ದು, ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಬಾಲ್ಯವಿವಾಹ ತಡೆಗಟ್ಟಲು ತರಬೇತಿ ಕಾರ್ಯಾಗಾರವು ತುಂಬಾ ಅವಶ್ಯಕ ಎಂದು ಪಿ. ಮುರಳಿ ಮೋಹನ ರೆಡ್ಡಿ ಅವರು ಸಲಹೆ ನೀಡಿದರು.

ಈ ವೇಳೆ ಮಾತನಾಡಿದ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಸಿಸ್ಟರ್ ಲೂರ್ದ್ ಮೇರಿಜೆ ಅವರು, ಮಕ್ಕಳ ಹಕ್ಕುಗಳ ಸಂರಕ್ಷಣೆಯಲ್ಲಿ ಶಿಕ್ಷಕರ ಪಾತ್ರ ಜವಾಬ್ದಾರಿಯುತವಾಗಿದ್ದು, ಶಿಕ್ಷಕರೆಂದರೆ ಕೇವಲ ಮಕ್ಕಳಗೆ ಶಿಕ್ಷಣ ನೀಡುವದಲ್ಲದೆ ಅವರಿಗೆ ಮಾನವೀಯ ಮೌಲ್ಯ, ಜೀವನ ಕೌಶಲ್ಯಗಳ ಕುರಿತು ಮಕ್ಕಳಗೆ ತಿಳಿಸುವದು. ಜೊತೆಗೆ ಶಾಲೆಯಲ್ಲಿ ಗೈರುಹಾಜರಿರುವ ಮಕ್ಕಳ ಕುರಿತು ಗಮನಹರಿಸಬೇಕು.

ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ ಪ್ರಕಾರ 6 ರಿಂದ 14 ವರ್ಷಎಲ್ಲ ಮಕ್ಕಳು ಶಿಕ್ಷಣ ಪಡೆಯಬೇಕೆಂದು ತಿಳಿಸಿದರು.




ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ ಕಾಯ್ದೆ–2016 ಮತ್ತು ತಿದ್ದುಪಡಿ ನೀತಿ 2023 ರನ್ವಯ ಪ್ರತಿ ಶಾಲೆಯಲ್ಲಿ ಮಕ್ಕಳ ರಕ್ಷಣಾ ಸಮಿತಿಯನ್ನು ಕಡ್ಡಾಯವಾಗಿ ರಚಿಸಬೇಕು. ಅದೇ ರೀತಿಯಲ್ಲಿ ಪ್ರತಿಯೊಂದು ಸಮಿತಿಯಲ್ಲಿ ಮಕ್ಕಳ ಸಂರಕ್ಷಣಾಧಿಕಾರಿ, ಆಪ್ತಸಮಾಲೋಚಕರು ಕಡ್ಡಾಯವಾಗಿ ನೇಮಕ ಮಡಿಕೊಳ್ಳಬೇಕು. ಎಂದು ಬೆಳಗಾವಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಹಾಂತೇಶ ಭಜಂತ್ರಿ ಅವರು ತಿಳಿಸಿದರು.

ಮಕ್ಕಳ ರಕ್ಷಣಾ ಸಮಿತಿಯು ನಿರ್ವಹಿಸಬೇಕಾದ ಪಾತ್ರ ಮತ್ತು ಜವಾಬ್ದಾರಿ, ಸಮಿತಿಯ ಅಧ್ಯಕ್ಷರು ಮತ್ತು ಮಕ್ಕಳ ರಕ್ಷಣಾಧಿಕಾರಿಗಳ ನೇಮಕಾತಿ, ಹಾಗೂ ನಿರ್ವಹಿ ಸಬೇಕಾದ ಜವಾಬ್ದಾರಿ, ಶಾಲಾ ನಿರ್ವಹಣಾ ಸಮಿತಿ, ಸಲಹಾ ಪೆಟ್ಟಿಗೆ, ಆಪ್ತಸಮಾಲೋಚನ ಸೇವೆಗಳು ಬಗ್ಗೆ ಸವಿಸ್ತಾರವಾಗಿ ವಿವರಿಸಿದರು.

ನಂತರ ಜಿಲ್ಲಾ ಮಕ್ಕಳ ರಕ್ಷಣಾಘಟಕ, ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ಸಹಾಯವಾಣಿ1098 ,ಬಾಲ ನ್ಯಾಯ ಮಂಡಳಿ, ಮಕ್ಕಳ ವಿಶೇಷ ಪೊಲೀಸ್ಘಟಕ ದಿಂದಇರುವ ಸೇವೆಗಳ ಬಗ್ಗೆ ಮಾಹಿತಿ ನೀಡಿ ಇದರ ಲಾಭ ಪಡೆಯುವಂತೆ ತಿಳಿಸಿದರು.

ಪಂಚಾಯತ ರಾಜ್ಯ ಅಧಿನಿಯಮ ಕಾಯ್ದೆ 1993ರ ತಿದ್ದುಪಡಿ 2015ರ ಪ್ರಕಾರ ಗ್ರಾಮ ಪಂಚಾಯತ ಮಹಿಳೆ ಮತ್ತು ಮಕ್ಕಳ ರಕ್ಷಣೆಗಾಗಿ ಕಾವಲು ಸಭೆ ಮಾಡುವುದು ಕಡ್ಡಾಯವಾಗಬೇಕು. ನಮ್ಮ ಜಿಲ್ಲೆಯಲ್ಲಿ ಮಹಿಳೆ & ಮಕ್ಕಳ ರಕ್ಷಣೆ ಆಗಬೇಕೆಂದರೆ ಕೇವಲ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಮಾತ್ರ ಹೊನೆಗಾರರಾಗದೇ, ಗ್ರಾಮ ಲೆಕ್ಕಾಧಿಕಾರಿಗಳು, ಬೀಟ್ ಪೊಲೀಸ್, ಶಾಲಾ ಮುಖ್ಯೋಪಾಧ್ಯಯರಿಗೆ ಸಮಿತಿಯ ಬಗ್ಗೆ ಅರಿವು ಮೂಡಿಸಬೇಕು.

ಮಕ್ಕಳ ರಕ್ಷಣಾ ಸಮಿತಿಗಳು ಶಾಲಾ ಮಟ್ಟದಲ್ಲಿ ಗಂಭಿರವಾರಿಕಾರ್ಯನಿರ್ವಹಣೆ ಮಾಡುವುದಾದರೆ ಮಕ್ಕಳ ಮೇಲಾಗುವ ದೌರ್ಜನ್ಯಗಳು, ದೈಹೀಕ ಹಲ್ಲೇಗಳು ಕಡಿಮೆಯಾಗಿ ಮಕ್ಕಳ ಸ್ನೇಹಿ ವಾತಾವರಣ ನಿರ್ಮಾಣವಾಗುವುದು ಯಾವುದೇ ಸಂದೇಹ ಇಲ್ಲ ಎಂದು ಮಹಾಂತೇಶ ಭಜಂತ್ರಿ ಅವರು ತಿಳಿಸಿದರು.

ಮಂಗಳೂರು ಶಾಂತಿಧಾಮ ಸಂದೇಶ ಟ್ರಸ್ಟ ನಿರ್ದೇಶಕರು ಸಿಸ್ಟರ್ ಡುಲ್‌ಸಿನ್ ಕ್ರಸ್ತಾ ಅವರು ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡಿದ ಅವರು ಸಮಾಜದಲ್ಲಿ ಮಕ್ಕಳು ಗೌರವಯುತವಾಗಿ ಬದುಕಬೇಕೆಂದರೆ, ಬಾಲ್ಯವಿವಾಹ, ಬಾಲಕಾರ್ಮಿಕ, ಜೀತ ಪದ್ಧತಿ, ಅಡತಡೆಉಂಟು ಮಾಡುತ್ತದೆ. ಅದನ್ನು ತಡೆಯುವ ಅಧಿಕಾರ ನಮಗೆ ಇದೆ ಎಂದರು.

ಈ ಹಕ್ಕನ್ನು ನಮಗೆ ಸಂವಿಧಾನ ಕೊಟ್ಟಿದೆ. ಬೆಳಗಾವಿ ಜಿಲ್ಲೆಯಲ್ಲಿ ಬಾಲ್ಯವಿವಾಹ ಬಾಲ ಕಾರ್ಮಿಕ ಪದ್ಧತಿ ಆಗದಂತೆ ನೋಡಿಕೊಳ್ಳೋಣ ಎಂದು ಸಿಸ್ಟರ್ ಡುಲ್‌ಸಿನ್ ಕ್ರಸ್ತಾ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿ ಯೋಜನಾ ನಿರ್ದೇಶಕರಾದ ರವಿ ಬಂಗಾರೆಪ್ಪನವರ, ಮೀರಾಕಲ್ ಪೌಂಡೇಶನ್ ಆಪ್ ಇಂಡಿಯಾ ರಾಜ್ಯ ಪ್ರತಿನಿಧಿ ಅರುಣಾ ಕೃಷ್ಣ, ಕೇತ್ರ ಶಿಕ್ಷಣಾಧಿಕಾರಿಗಳಾದ ಎಸ್ ಪಿ ದಾಸಪ್ಪನವರ, ಬಿ ಆರ್ ಸಿ ಮೇದಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ 1098 ಅನಮೋಲ ತಂಗುಧಾಮ ಸಂಸ್ಥೆಯ ಸಿಬ್ಬಂದಿ ಹಾಗೂ ಬೆಳಗಾವಿ ಗ್ರಾಮೀಣ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರು ಸೇರಿದಂತೆ 330 ಶಿಭಿರಾರ್ಥಿಗಳು ತರಬೇತಿ ಪ್ರಯೋಜನ ಪಡೆದರು. ಪ್ರವೀಣ ಗೂನ್ನಾಲ್ವಿ ಕಾರ್ಯಕ್ರಮ ನಿರೂಪಿಸಿದರು, ಲಕ್ಷೀ ಸುಳಗೇಕರ್ ಸ್ವಾಗತಿಸಿದರು.

## ವಾ.ಕ.ರ.ಸಾ.ಸಂಸ್ಥೆ: ಶಿಶಿಕ್ಷು ಅಭ್ಯರ್ಥಿಗಳ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ, ಬೆಳಗಾವಿ ವಿಭಾಗದ ವತಿಯಿಂದ ಐ.ಟಿ.ಐ ನಲ್ಲಿ ಮೆಕ್ಯಾನಿಕಲ್ ಡಿಸೇಲ್, ಮೆಕ್ಯಾನಿಕ್ ಮೋಟರ್ ವೆಹಿಕಲ್, ಎಲೇಕ್ಟ್ರೀಶಿಯನ್, ಫಿಟ್ಟರ್, ವೇಲ್ಡರ್ (ಗ್ಯಾಸ್ & ಎಲೇಕ್ಟ್ರೀಕ್), ಟರ್ನರ್ ಮತ್ತು ಕೋಪಾ (Computer operator & programming assistant) ಟ್ರೇಡ್‌ನ ವಿದ್ಯಾರ್ಹತೆ ಪೂರ್ಣಗೊಳಿಸಿರುವ ಅಭ್ಯರ್ಥಿಗಳಿಂದ 01 (ಒಂದು) ವರ್ಷ ಅವಧಿಗೆ ಶಿಶಿಕ್ಷು ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಇಚ್ಛೇಯುಳ್ಳ ಅಭ್ಯರ್ಥಿಗಳು www.apprenticeshipindia.gov.in ಆನ್‌ಲೈನ್‌ನಲ್ಲಿ ತಮ್ಮ ವೈಯಕ್ತಿಕ/ಶೈಕ್ಷಣಿಕ ಮಾಹಿತಿ/ದಾಖಲಾತಿಗಳನ್ನು ಭರಣ/ಅಪಲೋಡ್ ಮಾಡಿ ತಮ್ಮ ನೊಂದಣಿ 100% ಆಗಿರುವ ಕುರಿತಂತೆ ಖಚಿತಪಡಿಸಿಕೊಂಡ ನಂತರ NWKRTC BELAGAVI E02172900001 ರಡಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.

ನೊಂದಣಿ ಇಲ್ಲದೇ/ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸದೇ ಇರುವಂತಹ ಅಭ್ಯರ್ಥಿಗಳನ್ನು ಅನರ್ಹಗೊಳಿಸಲಾಗುವುದು.

ಪರಿಪೂರ್ಣವಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ನೇರ ಸಂದರ್ಶನಕ್ಕಾಗಿ ಜನವರಿ 11, 2024 ರಂದು ಬೆಳಿಗ್ಗೆ 11 ಗಂಟೆಗೆ ಎಲ್ಲ ಮೂಲ ಶೈಕ್ಷಣಿಕ/ವೈಯಕ್ತಕ ದಾಖಲಾತಿಗಳೊಂದಿಗೆ ವಾ.ಕ.ರ.ಸಾ.ಸಂಸ್ಥೆಯ ಬೆಳಗಾವಿ ವಿಭಾಗೀಯ ಕಛೇರಿಗೆ ಹಾಜರಾಗಬೇಕು.

ಹೆಚ್ಚಿನ ವಿವರಗಳಿಗಾಗಿ 08312468130/7760991603 ದೂರವಾಣಿ ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ವಾಕರಸಾಸಂಸ್ಥೆಯ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರ.ಸಿ.ಯು 2023–24ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪ್ರವೇಶಾತಿ ದಿನಾಂಕ ವಿಸ್ತರಣೆ

ಬೆಳಗಾವಿ:"2023–24ನೇ ಶೈಕ್ಷಣಿಕ ಸಾಲಿನ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಸ್ನಾತಕೋತ್ತರ ವಿವಿಧ ವಿಭಾಗಗಳಲ್ಲಿ ಬಾಕಿ ಉಳಿದಿರುವ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ದಿನಾಂಕ: 24–12–2023 ರಿಂದ 26–12–2023 ರ ವರೆಗೆ ಆನ್ಲೈನ್ (UUCMS) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

(Through UUCMS portal https://uucms.karnataka.gov.in) ಆದ್ದರಿಂದ ಅರ್ಹ ಅಭ್ಯರ್ಥಿಗಳು ಆಸಕ್ತ ವಿಭಾಗದ ಬಾಕಿ ಇರುವ ಸೀಟುಗಳ ಕುರಿತು ವಿಶ್ವವಿದ್ಯಾಲಯದ ಜಾಲತಾಣದಲ್ಲಿ ಖಚಿತಪಡಿಸಿಕೊಂಡು ಅರ್ಜಿಗಳನ್ನು ಗಗಅಅಖ ತಂತ್ರಾಂಶದ ಮೂಲಕ ಸಲ್ಲಿಸಲು ತಿಳಿಸಲಾಗಿದೆ.

ಈಗಾಗಲೇ ಅರ್ಜಿ ಸಲ್ಲಿಸಿದವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣ www.rcub.ac.in ನಿಂದ ಅಥವಾ ಸ್ನಾತಕೋತ್ತರ ವಿಭಾಗಗಳಿಂದ ಪಡೆಯಬಹುದಾಗಿದೆ ಎಂದು ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಯಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ 2023–24ನೇ ಸಾಲಿನ "ಸಂಯಮ ಪ್ರಶಸ್ತಿ"ಗೆ ಅರ್ಜಿ ಆಹ್ವಾನಿಸಿದೆ.

ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ವಿಶಿಷ್ಠ ಸಾಧನೆ ಮಾಡಿರುವ ಸಾಧಕರು ಹಾಗೂ ಸಂಘ ಸಂಸ್ಥೆಗಳು 2024 ಜನವರಿ 15 ರೊಳಗೆ ಅರ್ಜಿ ಸಲ್ಲಿಸಬಹುದು.

ಅರ್ಜಿಯನ್ನು ಮೇಲ್ kar-temperance@gmail.com ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 6ನೇ ಮಹಡಿ, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು– 560001 ಈ ವಿಳಾಸಕ್ಕೆ ಕಳುಹಿಸುವಂತೆ ಪ್ರಕಟಣೆ ತಿಳಿಸಿದೆ.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: Basic & Advanced Courses ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ಅಲ್ಪಸಂಖ್ಯಾತರ ಕೌಶಲ್ಯ ಅಭಿವೃದ್ಧಿ ಯೋಜನೆಯಡಿ Basic & Advanced Courses ಕುರಿತಾದ ತರಬೇತಿ ನೀಡಲು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅರ್ಹ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ) ಅಭ್ಯರ್ಥಿಗಳು ಕೊನೆಯ ದಿನಾಂಕ: 05.01.2024 ರೊಳಗಾಗಿ www.dom.karanataka.gov.in ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು ಎಂದು ಬೆಳಗಾವಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಹಿತಿ ಆಶಾ ಕಡಪಟ್ಟಿ ಅವರ ಮೂರು ಕೃತಿಗಳ ಲೋಕಾರ್ಪಣೆ

ಬೆಳಗಾವಿ: ನಮಗರಿವಿಲ್ಲದೆಯೇ ನೋವನ್ನು ದುಃಖವನ್ನು ಅನುಭವಿಸುತ್ತೇವೆ, ಪೂಜಿಸುತ್ತೇವೆ. ಆ ಅನುಭವವೇ ಅನುಭೂತಿಯಾಗುತ್ತದೆ. ಕ್ಷಣವೊಂದರ ಅನುಭವದ ಆತ್ಮಾಭಿವ್ಯಕ್ತಿಯೇ ಕಾವ್ಯವಾಗುತ್ತದೆ. ಕಾವ್ಯಕ್ಕೆ ನೋವು, ದುಃಖ ವಿರಹವೇ ಮುಖ್ಯ ಪರಿಣಾಮಕಾರಕ ಎಂದು ಜಾನಪದ ವಿದ್ವಾಂಸ–ಚಿಂತಕ ಡಾ. ಸಿ.ಕೆ. ನಾವಲಗಿ ಅಭಿಪ್ರಾಯ ವ್ಯಕ್ತಪಡಿಸಿದರು.

ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಆಯೋಜಿಸಲಾದ ಸಾಹಿತ್ಯ ಸಂವಾದ ಹಾಗೂ ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘ ಇವುಗಳ ಸಂಯುಕ್ತ ಆಶ್ರಯದಲ್ಲಿ ಸಾಹಿತಿ ಆಶಾ ಕಡಪಟ್ಟಿ ಅವರ ಮೂರು ಕೃತಿಗಳ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಆಶಾ ಕಡಪಟ್ಟಿ ಅವರ " ಅವ್ವ ನಿನ್ನಾರ ಹೋಲರ" ತ್ರಿಪದಿ ಕವನ ಸಂಕಲವನ್ನು ಪರಿಚಯಿಸುತ್ತಾ ಮಾತನಾಡಿದ ಅವರು, ತಾಯಿಯನ್ನು , ಪತಿಯನ್ನು ಕಳೆದುಕೊಂಡ ದುಃಖತಪ್ತ ಕವಯಿತ್ರಿ ತನ್ನ ವಿರಹವೇದನೆಯ ಅಳಲನ್ನು ಮಮ್ಮಲ ಮರಗುವಂತೆ ತೋಡಿಕೊಂಡಿದ್ದಾಳೆ. ಇದು ಅತ್ಮಗತ ಕಾವ್ಯವೆನಿಸಿದರೂ ಎಲ್ಲ ತಾಯಿ ಮಗಳಿಗೂ




ಅನ್ವಯಿಸುವಂಥದ್ದು, ಹಾಗಾಗಿ ಇದೊಂದು ಜನಪದ ತ್ರಿಪದಿ ಸಾಹಿತ್ಯಕ್ಕೆ ನಿಷ್ಠೆಯಿಂದ ಕೊಟ್ಟ ವಿಶಿಷ್ಠ ಕೊಡುಗೆ ಎಂದು ನಾವಲಗಿ ಮೆಚ್ಚುಗೆ ವ್ಯಕ್ತಪಡಿಸಿದರು.

ಡಾ. ಸರಜೂ ಕಾಟ್ಕರ್ ಮಾತನಾಡಿ, ಸಾಕಷ್ಟು ಮಹಿಳೆಯರನ್ನು ಸಾಹಿತ್ಯ ಕ್ಷೇತ್ರದಲ್ಲಿ ಪ್ರೋತ್ಸಾಹಿಸಿ ಬೆಳೆಸಿರುವ ಕೀರ್ತಿ ಆಶಾ ಕಡಪಟ್ಟಿ ಅವರಿಗೆ ಸಲ್ಲುತ್ತದೆ. ಒಂದು ಕಾಲಕ್ಕೆ ಬೆಳಗಾವಿ ಲೇಖಕಿಯರ ಸಂಘದಲ್ಲಿ ಕೇವಲ ನಾಲ್ಕು ಸದಸ್ಯರು ಇದ್ದರು.

ಇವತ್ತು ಅದು ತುಂಬು ಕುಟುಂಬವಾಗಿದೆ. ಬರೆಯಲು ಪ್ರೋತ್ಸಾಹಿಸಿ ಸಾಕಷ್ಟು ಬೆಂಬಲ ನೀಡುತ್ತಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಹಾವೇರಿ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ವಿಜಯಲಕ್ಷ್ಮಿ ಪುಟ್ಟಿ ಅವರು ಮಾತನಾಡಿ, ಆಶಾ ಕಡಪಟ್ಟಿ ಅವರು ಒಬ್ಬ ಸೃಜನಶೀಲ ಹೃದಯವಂತ ಕವಿಯತ್ರಿ, ತಾವು ಬೆಳೆದು ಜತೆಗೆ ಇರುವವರನ್ನು ಬೆಳೆಸುವ ಮನೋಭಾವ ಹೊಂದಿದವರು. ಈ ಸಂಘವು ಇಂದು ಬೃಹದಾಕಾರವಾಗಿ ಬೆಳೆದಿರುವುದು ಹೆಮ್ಮೆಯ ವಿಷಯ ಎಂದರು.


ಡಾ. ಗುರುದೇವಿ ಹುಲೆಪ್ಪನವರಮಠ "ಹರಕು ಕೌದಿಯ ಕಿಂಡಿ" ಪುಸ್ತಕ ಅವಲೋಕಿಸುತ್ತಾ ಜೀವನದಲ್ಲಿ ಏನೇ ಬಂದರೂ ನಗುತ ಬದುಕುವ ಕಲೆ ಕಂಡುಕೊಂಡವರು ಆಶಾ ಎನ್ನುತ್ತಾ ಅವರ ಕವನಗಳ ಬುತ್ತಿ ಮುಂದಿಟ್ಟರು. ಹಾದಿಗಳ ಹುಡುಕುತ್ತಾ ಎಂಬ ಕಥಾಸಂಕಲನ ಪರಿಚಯಿಸುತ್ತ ಸುನಂದ ಎಮ್ಮಿಯವರು ಆಶಾ ಅವರು ನಮ್ಮೆಲ್ಲರಿಗೂ ಸಲಹೆ ಸೂಚನೆಗಳನ್ನು ನೀಡುತ್ತಾ ಹುರಿದುಂಬಿಸುತ್ತಿರುವ ಸಹೃದಯರು. ಅವರ ಕಥೆಗಳು ಓದುಗರ ಹಿಡಿದಿಡುವಲ್ಲಿ ಸಫಲವಾಗಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷೆ ಜಯಶೀಲಾ ಬ್ಯಾಕೋಡ ಸ್ವಾಗತಿಸಿದರು.ಹೀರಾ ಚೌಗಲೆ ಪ್ರಾರ್ಥಿಸಿದರು. ಕೀರ್ತಿ ಮತ್ತು ಕವಿತಾ ನಾಡಗೀತೆ ಹಾಡಿದರು . ಸುನಂದಾ ಎಮ್ಮಿ, ಡಾ. ಅನ್ನಪೂರ್ಣ ಹಿರೇಮಠ ನಿರೂಪಿಸಿ, ವಂದಿಸಿದರು.

## ಕ್ರಿಸಮಸ್ ಹಬ್ಬದ ಪ್ರಯುಕ್ತ ಜಿಂಗಲ್ ಬೆಲ್ಸ್ 2k23 ಈವೆಂಟ್

ಬೆಳಗಾವಿ: ಬೆನನ್ ಸ್ಮಿತ ಕಾಲೇಜ್ ಆಫ್ ಫೈನ್ ಆರ್ಟ್ಸ್ ಬೆಳಗಾವಿಯಲ್ಲಿ ಕ್ರಿಸಮಸ್ ಹಬ್ಬದ ಪ್ರಯುಕ್ತ ಜಿಂಗಲ್ ಬೆಲ್ಸ್ 2k23 ಈವೆಂಟ್ ಆಯೋಜಿಸಲಾಗಿತ್ತು.

ಆನಂದಕ್ಕಾಗಿ ಒಂದು ಕಲೆ ಮತ್ತು ಜೀವನಕ್ಕಾಗಿ ಒಂದು ವೃತ್ತಿ ನೆಮ್ಮದಿಯ ಜೀವನಕ್ಕೆ ಅವಶ್ಯ ಮತ್ತು ಅನಿವಾರ್ಯ ಲಲಿತಕಲೆಗಳು ನಮ್ಮ ಭಾವನೆಗಳ ಉದಾತ್ತ ಅಭಿವ್ಯಕ್ತಿಗಳಾಗಿವೆ. ಭಾವನೆಗಳು ಇಲ್ಲದ ಮನುಷ್ಯ ಕಾಡು ಗಲ್ಲು ಇದ್ದಂತೆ, ಕಾಡು ಗಲ್ಲನ್ನು ಗುದ್ದಿದರೂ ಅಷ್ಟೇ ಮುದ್ದಿಸಿದರೂ ಅಷ್ಟೇ ಅದು ಯಾವುದಕ್ಕೂ ಪ್ರತಿಕ್ರಯಿಸುವದಿಲ್ಲ. ಸೌಂದರ್ಯಪ್ರಜ್ಞೆ ಮತ್ತು ಅದನ್ನು ವ್ಯಕ್ತಪಡಿಸುವ ಕಲೆ ಇಲ್ಲದವ ಕಗ್ಗಲ್ಲಿನಂತೆ. ಬೆಳಗಾವಿಯ ಏಕೈಕ




ವಿಶಿಷ್ಟ ಲಲಿತ ಕಲಾ ವಿದ್ಯಾಲಯದ ಮೂಲಕ ಬೆನನ್ ಸ್ಮಿತ್ ಸಂಸ್ಥೆಯು ಯುವ ಜನತೆಯಲ್ಲಿ ಕಲೆ ಕೌಶಲ್ಯವನ್ನು ಅಭಿವ್ಯಕ್ತಿಸುವ ಸಮರ್ಥ ವೇದಿಕೆ ಒದಗಿಸಿ ಕಲಾರಾಧಕರ ಕೃತಜ್ಞತೆಗೆ ಪಾತ್ರವಾಗಿದೆ ಎಂದು ಕ್ರಿಸಮಸ್ ಹಬ್ಬದ ನಿಮಿತ್ತ ಹಮ್ಮಿಕೊಂಡಿದ್ದ ಜಿಂಗಲ್ ಬೆಲ್ಸ್ 2k23 ಈವೆಂಟ್ ಮುಖ್ಯ ಅತಿಥಿಯಾಗಿದ್ದ ವಿಶ್ರಾಂತ ಇಂಗ್ಲೀಷ್ ಪ್ರಾಧ್ಯಾಪಕಿ ಡಾ. ಗುರುದೇವಿ ಉ. ಹುಲೆಪ್ಪನವರಮಠ ಹೇಳಿದರು. ವಿವಿಧ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು.

ಕಾರ್ಯಕ್ರಮದಲ್ಲಿ ಇನ್ನೇತರ ಅತಿಥಿಯಾಗಿ ಶ್ರೀ ವಿಜಯ ಎಲಿಷ್, ಸಂಯೋಜಕರು ಬೆನನ್ ಸ್ಮಿತ್ ಅಂಗ ಸಂಸ್ಥೆ ಹಾಗೂ ಪ್ರಾಚಾರ್ಯರು ಬೆನನ್ ಸ್ಮಿತ್ ಪದವಿ ಪೂರ್ವ ಮಹಾವಿದ್ಯಾಲಯ, ಬೆಳಗಾವಿ. ಡಾ. ಸ್ಯಾಮುಯೆಲ್ ಡೇನಿಯಲ್, ಪ್ರಾಚಾರ್ಯರು ಬೆನನ್ ಸ್ಮಿತ್ ಪದವಿ ಮಹಾವಿದ್ಯಾಲಯ ಬೆಳಗಾವಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾ ವಿದ್ಯಾಲಯದ ಪ್ರಾಚಾರ್ಯರಾದ ಶ್ರೀಮತಿ. ವೃಂದಾ ರುಕಡಿಕರ್‌ರವರು ವಹಿಸಿದ್ದರು.

ಪ್ರೊ. ರೀಟಾ ವಿ. ಬಣಗಾರ, ಪ್ರೊ. ದೇವದತ್ತ ರುಕಡಿಕರ, ಪ್ರೊ. ಅಡಿವೆಪ್ಪಾ ಮುಸರಿ, ಪ್ರೊ. ದೇವರಾಜ ಪೂಜಾರಿ, ಪ್ರೊ. ಅಭಿಜೀತ ದೇವ, ಶ್ರೀಮತಿ. ಎಮಿಲಾ ಬಣಗಾರ ಹಾಗೂ ಪಾಲಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಕುಮಾರ. ನೀಲೇಶ ಪಾಟೀಲ ಮತ್ತು ಕುಮಾರಿ. ದಿವ್ಯಾ ಕಂಗ್ರಾಳ್ಕರ್ ನಿರೂಪಿಸಿದರು. ಕಾರ್ಯಕ್ರಮವನ್ನು ಕುಮಾರಿ. ಶ್ರೇಯಾ ಕುಲಕರ್ಣಿ ವಂದಿಸಿದರು.



ಇತ್ತೀಚೆಗೆ ಬೆಳಗಾವಿ ಸಹ್ಯಾದ್ರಿ ನಗರದ ಕೆ. ಎಲ್. ಇ.. ಅಂತರ ರಾಷ್ಟ್ರೀಯ ಶಾಲೆಯಲ್ಲಿ ವಿಹಾನ ಫೌಂಡೇಷನ್ ವತಿಯಿಂದ ಏರ್ಪಡಿಸಲಾಗಿದ್ದ ಅಂತರ್ ಶಾಲಾ ಫುಟ್ ಬಾಲ್ ಪಂದ್ಯ ದಾಳಿಯನ್ನು ಕ್ರೀಡಾ ಸಚಿವರಾದ ಶ್ರೀ ಬಿ. ನಾಗೇಂದ್ರ ಅವರು ಉದ್ಘಾಟಿಸಿದರು, ಚಿತ್ರದಲ್ಲಿ ಸೋಮಶೇಖರ್ ಕಣಗಲಿ, ಶ್ರೀಮತಿ ದೀಪ್ತಿ ಇಂಗಳೆ, ಹಾಗೂ ಮುಂತಾದವರನ್ನು ಕಾಣಬಹುದು.

## ನೀರಿನ ಸದ್ಬಳಿಕೆ ಕುರಿತು ಮಾಹಿತಿ

ಬೆಳಗಾವಿ: ನೀರು ಅಮೃತವಾದ ಸಂಪನ್ಮೂಲ. ಅಗತ್ಯಕ್ಕೆ ಅನಗುಣವಾಗಿ ನೀರನ್ನು ನ್ಯಾಯೋಚಿತವಾಗಿ ಬಳಕೆ ಮಾಡುವ ಜವಾಬ್ದಾರಿ ಮೂಡಿಸುವ 24/7 ನಿರಂತರ ನೀರು ಸರಬರಾಜು ಯೋಜನೆ ಈಗಾಗಲೇ ನಗರದಲ್ಲಿ ಆರಂಭವಾಗಿ ಕಾಮಗಾರಿ ಪ್ರಗತಿಯಲ್ಲಿದ್ದು, ನಾಗರೀಕರಿಗೆ ಯೋಜನೆಯ ಕುರಿತು ನಿರಂತರ ಮಾಹಿತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ.

ಸದ್ಯ ಆಪರೇಟರ್ ಆಧ್ಯತೆಯ ಮೇರೆಗೆ ನಳ ಸಂಪರ್ಕವನ್ನು ಪರಿವರ್ತನೆಗೊಳಿಸುತ್ತಿರುವ ವಲಯಗಳಲ್ಲಿ ಮುಖ್ಯವಾಗಿ ನಳಸಂಪರ್ಕ ಯೋಜನೆ, ನೀರಿನ ಶುಲ್ಕ, ಮೀಟರ್ ಸಂರಕ್ಷಣೆ ಹಾಗೂ ನೀರಿನ ನ್ಯಾಯೋಚಿತ ಬಳಕೆ ಕುರಿತು ಜನರಲ್ಲಿ ತಿಳುವಳಿಕೆ ಮೂಡಿಸಲು ಬೆಳಗಾವಿ ಮಹಾನಗರ ಪಾಲಿಕೆ ಮತ್ತು ಕೆಯುಐಡಿಎಫ್‌ಸಿ ಜಂಟಿಯಾಗಿ ಕಾರ್ಯತಂತ್ರ ರೂಪಿಸಿವೆ.

ಅರಿವು ಮೂಡಿಸುವ ಸಲುವಾಗಿ 3 ಹಂತದ ಕಾರ್ಯತಂತ್ರವನ್ನು ರೂಪಿಸಿದ್ದು ಮೊದಲಿಗೆ ಪ್ರತಿ ಡಿಎಮ್‌ಎ ಅಡಿಯಲ್ಲಿ ಬರುವ ಹಾಲಿ, ನೂತನ ಹಾಗೂ ಅನಧಿಕೃತ ಗ್ರಾಹಕರ ಮ್ಯಾಪಿಂಗ್ ಮಾಡಿಸಿ ನಂತರ ಪ್ರತಿ 200–250 ನಳಸಂಪರ್ಕಗಳಿಗೆ ಒಂದು ಅರಿವು ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಹಾಗೂ ಅಗತ್ಯಕ್ಕೆ ಅನುಗುಣವಾಗಿ ವಿಶೇಷ ಅಭಿಯಾನಗಳನ್ನು ಆಯೋಜಿಸುವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಈಗಾಗಲೇ ಸಹ್ಯಾದ್ರಿನಗರದಲ್ಲಿ ದಿನಾಂಕ 12–12–2023 ರಂದು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಂಡು ಚಾಲನೆ ನೀಡಲಾಗಿದೆ.ಈ ಎಲ್ಲಾ ಕಾರ್ಯಕ್ರಮಗಳನ್ನು ಕೆಯುಐಡಿಎಫ್‌ಸಿ ಹಾಗೂ ಮಹಾನಗರ ಪಾಲಿಕೆ ನೇಮಕ ಮಾಡಿಕೊಂಡಿರುವ ನೆರವು ಸಂಸ್ಥೆಯ ಸಿಬ್ಬಂದಿ (ನೀರು ಸಖ/ಸಖಿ) ಗಳ ಮೂಲಕ ಕೈಗೊಳ್ಳಲಾಗುತ್ತಿದ್ದು, ಮೊದಲ ಹಂತದಲ್ಲಿ ಈ ತಂಡವು ನಗರದ ಸಹ್ಯಾದ್ರಿನಗರ, ಮುತ್ಯಾನಟ್ಟಿ, ಕಣಬರಗಿ. ಆರ್.ಸಿ ನಗರ, ಗುಮ್ಮಟಮಾಳ, ಆಂಜನೇಯ ನಗರ, ಅಟೋ ನಗರ,ಚನ್ನಮ್ಮ ಸೊಸೈಟಿ, ಮತ್ತು ಅಲರವಾಡ, ವಲಯಗಳಲ್ಲಿ ಮಾಹಿತಿ ಸಂಗ್ರಹಿಸಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಕೈಗೊಳ್ಳುತ್ತಿದ್ದು, ಹಂತ ಹಂತವಾಗಿ ನಗರದ ಎಲ್ಲ ಭಾಗಗಳಲ್ಲೂ ಇದು ವಿಸ್ತರಣೆಯಾಗಲಿದೆ.

ಆದಕಾರಣ ಸಾರ್ವಜನಿಕರು ಈ ನೀರು ಸಖ/ನೀರು ಸಖಿಯರು ತಮ್ಮ ಮನೆಗೆ ಬಂದಾಗ ತಮ್ಮ ಮನೆ, ನಳದ ಮಾಹಿತಿಯನ್ನು ನೀಡಿ, ಈ ಭಾಗದಲ್ಲಿ ಮೊದಲು 24/7 ನಿರಂತರ ನೀರು ಸರಬರಾಜು ಯೋಜನೆ ಅನುಷ್ಠಾನಗೊಳ್ಳಲು ಸಹಕರಿಸಲು ಮಹಾನಗರ ಪಾಲಿಕೆಯ ಪರವಾಗಿ ಕೆಯುಐಡಿಎಫ್‌ಸಿ ಅಧೀಕ್ಷಕ ಅಭಿಯಂತರರಾದ ಅಶೋಕ ಬುರಕುಲೆರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ರಹ್ಮಾಕುಮಾರಿಸ್ ಕೃಷಿ ವಿಭಾಗದ ವತಿಯಿಂದ ರಾಷ್ಟ್ರೀಯ ರೈತರ ದಿನಾಚರಣೆ

ಬೆಳಗಾವಿ: ರಾಷ್ಟ್ರೀಯ ರೈತರ ದಿನಾಚರಣೆಯನ್ನು ಬೆಳಗಾವಿ ಸಮೀಪ ಹಲಗಾ ಗ್ರಾಮದಲ್ಲಿ ಬ್ರಹ್ಮಾಕುಮಾರಿಸ್ ಕೃಷಿ ವಿಭಾಗದ ವತಿಯಿಂದ ಆಚರಿಸಲಾಯಿತು. ಪ್ರಾಸ್ತಾವಿಕವಾಗಿ ಮಾತನಾಡಿದ ರಾಜಯೋಗಿನಿ ಬಿ.ಕೆ. ಶಾಂತಾಅಕ್ಕನ್ನವರು ರೈತರ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡುತ್ತಾ ಬೇರೆಯವರಿಗೆ ಶಿಕ್ಷಣ ತರಬೇತಿ ನೀಡುವಂತೆ, ರೈತರಿಗೆ ಕೃಷಿಯ ಕುರಿತು ತರಬೇತಿ ನೀಡುವುದು ಅವಶ್ಯಕತೆ ಇದೆ. ವರ್ತಮಾನ ಸಮಯದಲ್ಲಿ ಎಲ್ಲ ರೈತ ಸಮುದಾಯದವರು ನಮ್ಮ ಮಕ್ಕಳು ಹೆಚ್ಚಿನ ವಿದ್ಯಾಭ್ಯಾಸ ಮಾಡಿ ಡಾಕ್ಟರ, ಇಂಜಿನೀಯರ್, ಲ್ಯಾಯರ್ ಸರ್ಕಾರಿ ನೌಕರಿ ಹಿಡಿಯಬೇಕೆಂದು ಬಯಸುತ್ತಾರೆ. ಎಲ್ಲರೂ ಇದೆ ರೀತಿ ಮಾಡಿದರೆ ಮುಂಬರುವ ದಿನಗಳಲ್ಲಿ ಎಲ್ಲರಿಗೂ ಆಹಾರ ಸಿಗುವುದು ಕಠಿಣವಾಗುತ್ತದೆ. ಹಳ್ಳಿಗಳಿಂದ ಹಾಲು ಪೇಟೆಗೆ ಹೋಗುತ್ತದೆ. ಪೇಟೆಯಿಂದ ಅಲ್ಕೋಹಾಲ




ಹಳ್ಳಿಗೆ ಬರತಾ ಇದೆ ಇದರಿಂದ ರೈತರ ಜೀವನ ಅದೋಗತಿ ಹೋಗುತ್ತಾಯಿದೆ. ಎಲ್ಲರೂ ಆರೋಗ್ಯವಾಗಿ ಇರಬೇಕಾದರೆ, ರಾಸಾಯಿನಿಕ ಮುಕ್ತ ಬೆಳೆಗಳನ್ನು ಬೆಳೆಸಿ, ಒಳ್ಳೆಯ ಆಹಾರ ಸೇವನೆಯಿಂದ ಆರೋಗ್ಯದಿಂದ ಇರಲು ಸಾಧ್ಯ ಎಂದರು.

ಮುಖ್ಯ ಅಥಿತಿಯಾಗಿ ಆಗಮಿಸಿದ ಶ್ರೀ ಶಿವನಗೌಡಾ ಪಾಟೀಲ, ಜಂಟಿ ನಿರ್ದೇಶಕರು, ಕೃಷಿ ಇಲಾಖೆ ಬೆಳಗಾವಿ ಜಿಲ್ಲಾ ಮಾತನಾಡುತ್ತಾ ರೈತರು ಕಾಯಕ ಯೋಗಿಗಳಾಗಿ ತಮ್ಮನ್ನು ತಾವು ಕೃಷಿಯಲ್ಲಿ ತೊಡಗಿಸಿಕೊಂಡಾಗ ಶಾರೀರಕವಾಗಿ, ಮಾನಸಿಕವಾಗಿ ಸದೃಢರಾಗುತ್ತಾರೆ. ಇವತ್ತು ಎಲ್ಲರಿಗೂ ಎಲ್ಲವು ಇದೆ. ಆದರೆ ಆರೋಗ್ಯವೇ ಇಲ್ಲ ಇದಕ್ಕೆ ಕಾರಣ. ರಾಸಾಯಿನಿಕ ಬಳಿಕೆ ರೈತರು ಸಾಯವ ಕೃಷಿ ಕೈಗೊಳ್ಳಬೇಕು. ಯಾರು ಸಂಪೂರ್ಣವಾಗಿ ಆರೋಗ್ಯದಿಂದ ಇರುತ್ತಾರೂ ಅವರೇ ನಿಜವಾದ ಶ್ರೀಮಂತರು ಎಂದರು. ಅತಿಥಿಯಾಗಿ ಆಗಮಿಸಿದ ಅಖಂಡ ಕರ್ನಾಟಕದ ರೈತ ಸಂಘದ ಬೆಳಗಾವಿ ಜಿಲ್ಲಾ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ವಾಲಿ ಮಾತನಾಡುತ್ತ, ರೈತರಲ್ಲಿ ತಾಳ್ಮೆ ಮುಖ್ಯ ವರ್ತಮಾನ ಸಮಯದಲ್ಲಿ ರೈತರು ಕಷ್ಟಪಟ್ಟು ದುಡಿದರು ಸರಿಯಾದ ಬೆಳೆ ಬರತಾ ಇಲ್ಲ. ಬೆಳೆ ಬಂದರು ಅದಕ್ಕೆ ಸರಿಯಾದ ಬೆಲೆ ಸಿಗತ್ತಾ ಇಲ್ಲ. ಆದ್ದರಿಂದ ರೈತರು ಕೃಷಿ ಮಾಡಲು ಹಿಂಜರಿಯುತ್ತಿದ್ದಾರೆ. ರೈತರು ಬೆಳೆದ ಬೆಳೆಗೆ ಸರಿಯಾದ ಬೆಲೆ ಸಿಗಬೇಕಾಗಿದೆ ಎಂದರು.

ರಾಜಯೋಗಿ ಬಿ. ಕೆ. ಮಹಾಂತೇಶ ಅಣ್ಣನ್ನವರು ಯೋಗದ ಮೂಲಕ ಕೃಷಿ ಬಗ್ಗೆ ತಿಳಿಸುತ್ತಾ ತಮ್ಮ ಸ್ವಂತ ಜಮೀನಿನಲ್ಲಿ ಯಾವುದೇ ರಾಸಾಯನಿಕ ಗೊಬ್ಬರ ಬಳಸದೇ, ಕೊಟ್ಟಿಗೆ ಗೊಬ್ಬರದಿಂದ ಪ್ಪಪ್ಪಾಯಿ ಹಾಗೂ ಹೆಸರುಕಾಳು ಬೆಳೆಯನ್ನು ಬೆಳೆಯುವ ಅನುಭವವನ್ನು ಹಂಚಿಕೊಂಡರು.

ಶ್ರೀಮತಿ ರಾಜೇಶ್ವರಿ ರೇಣುಕೆಗೌಡರ ಮಾತನಾಡುತ್ತಾ ಸಮಾಜದಲ್ಲಿ ರೈತರು ಅಂದರೆ ಕಿಳರಮೆ ಉಂಟಾಗಿದೆ. ರೈತನ ಮಗ ಅಂದರೆ ಹೆಣ್ಣು ಕೊಡಲು ಹಿಂದೆ ಮುಂದೆ ನೋಡುತ್ತಾರೆ. ಈ ರೀತಿ ಆಗಬಾರದು "ಒಕ್ಕಲಿಗ ಒಕ್ಕದಿದ್ದರೆ ಬಿಕ್ಕುವುದು ಜಗವೆಲ್ಲ" ಎಂಬಂತೆ ರೈತರಿಗೆ ಸಮಾಜದಲ್ಲಿ ಗೌರವ ಸಿಗುವ ಹಾಗೇ ಆಗಬೇಕು ಎಂದರು.

ರಾಜಯೋಗಿನಿ ಬಿ. ಕೆ. ಮೀನಾಕ್ಷಿ ಅಕ್ಕನ್ನವರು ಈಶ್ವರಿಯ ಸಂದೇಶ ನೀಡಿದರು. ರಾಷ್ಟ್ರೀಯ ರೈತ ದಿನಾಚಾರಣೆ ಅಂಗವಾಗಿ ಪ್ರಗತಿ ಪರ ರೈತರಾದ ಹಲಗಾದ ಶ್ರೀ ತವನಾಪ್ಪ ಪಾಯನ್ನವರ, ಆಲಾರವಾಡದ ಶ್ರೀ ಭೀಮಪ್ಪಾ ಪುನಜಿಗೌಡಾ, ಮಾಸ್ತಮರಡಿಯ ಶ್ರೀ ಮಾರುತಿ ಚೌಗಲಾ, ತಾರೀಹಾಳದ ಶ್ರೀ ಯಲ್ಲಪ್ಪಾ ನಿಲಜಕರ ಇವರನ್ನು ಸನ್ಮಾನಿಸಲಾಯಿತು.

ಬಿ. ಕೆ. ಸುನಿತಾ ಸ್ವಾಗತಿಸಿದರು, ಬಿ. ಕೆ. ಶ್ರೀಕಾಂತ ನಿರೂಪಿಸಿದರು, ಬಿ.ಕೆ. ಯಲ್ಲಪ್ಪಾ ಪರಾಂಡೆ ವಂದಿಸಿದರು.


RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089